ಸಂಪುಟ : 3 ಸಂಚಿಕೆ : 334 ಪುಟ : 4 ಬೆಲೆ : ರೂ. 4 ಶನಿವಾರ, ಫೆಬ್ರುವರಿ, 04, 2023 E-mail: newsbelagavi@gmail.com Mobile No-9900332089

ಬೆಳಗಾವಿ ಮತ್ತು ಬೆಂಗಳೂರಿನಿಂದ ಏಕ ಕಾಲದಲ್ಲಿ ಪ್ರಕಟಿತ

ಬೆಳಗಾವಿ ವರದಿ

BELAGAVI VARADI KANNADA DAILY

ಕರ್ನಾಟಕ ಕನ್ನಡ ದಿನಪತ್ರಿಕೆ

ಸಂಪಾದಕರು : ಸತೀಶ್.ಬಿ.ಜಿ

Volume : 3 Issue : 334 Pages : 4 Rate : 4 Rs Saturday, February 04, 2023 RNI : KARKAN/2020/79084 Post Regn.No:G-2/PMG/KA/NK/BM/139/2021-23 belagavivaradi@gmail.com

ನನ್ನ, ಡಿಕೆಶಿ ನಡುವೆ ಬಿರುಕು ಮೂಡಿಸಲು ನಕಲಿ ಪತ್ರ ಸೃಷ್ಟಿ: ಸಿದ್ದರಾಮಯ್ಯ

ಬೆಂಗಳೂರು: ನನ್ನ ಮತ್ತು ಡಿಕೆ.ಶಿವಕುಮಾರ್ ನಡುವೆ ಬಿರುಕು ಮೂಡಿಸಲು ನಕಲಿ ಪತ್ರಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡಲಾಗಿದೆ ಎಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ನಾಯಕ ಸಿದ್ದರಾಮಯ್ಯ ಅವರು ಗುರುವಾರ ಹೇಳಿದ್ದಾರೆ.

ಈ ಸಂಬಂಧ ಸಾಮಾಜಿಕ ಜಾಲತಾಣ ಟ್ವಿಟರ್ ನಲ್ಲಿ ಟ್ವೀಟ್ ಮಾಡಿರುವ ಅವರು, ನನ್ನ ಹೆಸರನ್ನು ದುರ್ಬಳಕೆ ಮಾಡಿಕೊಂಡ ನಕಲಿ ಪತ್ರವೊಂದು ಹರಿದಾಡುತ್ತಿದೆ. ನನ್ನ ಮತ್ತು ಕೆಪಿಸಿಸಿ ಅಧ್ಯಕ್ಷರ ಸಂಬಂಧವನ್ನು ಕೆಡಿಸುವ ದುರುದ್ದೇಶದಿಂದಲೇ ಯಾರೋ ಕಿಡಿಗೇಡಿಗಳು ಈ ಕೃತ್ಯ ನಡೆಸಿದ್ದಾರೆ.ಈ ಪತ್ರಕ್ಕೂ ನನಗೂ ಸಂಬಂಧ ಇಲ್ಲ ಎಂದು ಸ್ಪಷ್ಟಪಡಿಸುತ್ತಿದ್ದೇನೆಂದು ಹೇಳಿದ್ದಾರೆ.

ಮುಂದಿನ ಚುನಾವಣೆಯಲ್ಲಿ ಗೆಲುವಿನ ಹಾದಿಯಲ್ಲಿರುವ ನಮ್ಮ ಪಕ್ಷದ ಬಗ್ಗೆ ಕಾರ್ಯಕರ್ತರಲ್ಲಿ ಗೊಂದಲ ಮೂಡಿಸುವ ಉದ್ದೇಶದಿಂದಲೇ ಈ ಖೊಟ್ಟಿ ಪತ್ರವನ್ನು ಹರಿಯಬಿಡಲಾಗಿದೆ. ಈ ಬಗ್ಗೆ ನಾನು ಪೋಲಿಸರಿಗೆ ದೂರು ನೀಡಲಿದ್ದು, ಈ ದುಷ್ಕೃತ್ಯದ ಹಿಂದಿನ ದುರುಳರನ್ನು ಪತ್ತೆ ಹಚ್ಚಿ ಶಿಕ್ಷೆಗೊಳಪಡಿಸುತ್ತಾರೆಂದು ನಂಬಿದ್ದೇನೆಂದು ತಿಳಿಸಿದ್ದಾರೆ.

ಕರ್ನಾಟಕದ ಕಾಂಗ್ರೆಸ್ ನಾಯಕರು ಒಗ್ಗಟ್ಟಾಗಿದ್ದು, ನಕಲಿ ಪತ್ರಗಳು ಅಥವಾ ತಿರುಚಿದ ಚಿತ್ರಗಳು ಅವರ ಒಗ್ಗಟ್ಟನ್ನು ಮುರಿಯುವುದಿಲ್ಲ. ಕಾಂಗ್ರೆಸ್ ನಾಯಕರು ಒಗ್ಗಟ್ಟಾಗಿದ್ದಾರೆ. ವಿರೋಧದಿಂದ ಪ್ರಸಾರವಾಗುವ ಯಾವುದೇ ನಕಲಿ, ತಿರುಚಿದ ಚಿತ್ರಗಳು ನಮ್ಮ ಒಗ್ಗಟ್ಟು ಮತ್ತು ನಮ್ಮ ಜನರ ಬದ್ಧತೆಯನ್ನು ಮುರಿಯಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ.

"ನಾವು ಇದರ ವಿರುದ್ಧ ಪ್ರಕರಣವನ್ನು ದಾಖಲಿಸುತ್ತೇವೆ ಮತ್ತು ದುಷ್ಕರ್ಮಿಗಳನ್ನು ತಕ್ಷಣವೇ ಬಂಧಿಸಬೇಕೆಂದು ಒತ್ತಾಯಿಸುತ್ತೇವೆಂದು ಹೇಳಿದ್ದಾರೆ.

ಡಿಕೆ.ಶಿವಕುಮಾರ್ ವಿರುದ್ಧ ಸೋನಿಯಾ ಗಾಂಧಿಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆಂಬ ಪತ್ರವೊಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಈ ಪತ್ರ ವೈರಲ್ ಆಗಿದೆ.

ಪತ್ರದಲ್ಲಿ ಭಾರತ್ ಜೋಡೊ ಯಾತ್ರೆಯ ಸಮಾರೋಪದಲ್ಲಿ ಸಿದ್ದರಾಮಯ್ಯ ಭಾಗಿಯಾಗಿರಲಿಲ್ಲ ಹಾಗೂ ಟಿಕೆಟ್ ಹಂಚಿಕೆ ಕುರಿತು ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್, ಸಿದ್ದರಾಮಯ್ಯ ನಡುವೆ ಗುಂಪುಗಾರಿಕೆ ಇದೆ. ಇದು ಬಂಡಾಯಕ್ಕೆ ಕಾರಣವಾಗುತ್ತದೆ ಎನ್ನುವ ಅರ್ಥದಲ್ಲಿ ಕಾಂಗ್ರೆಸ್ ನಾಯಕಿ ಸೋನಿಯಾ ಗಾಂಧಿ ಅವರಿಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ ಎಂದು ಬಿಂಬಿಸಲಾಗಿದೆ.

ಕೇಂದ್ರ ಸರ್ಕಾರದ ಅಭಿವೃದ್ಧಿ ಆಧಾರಿತ ಬಜೆಟ್ ಕರ್ನಾಟಕದ ನಿರೀಕ್ಷೆಗಳನ್ನು ಪೂರೈಸಿದೆ: ಸಿಎಂ ಬೊಮ್ಮಾಯಿ

ಬೆಂಗಳೂರು: ಇತ್ತೀಚಿನ ಕೇಂದ್ರ ಬಜೆಟ್ ಅಭಿವೃದ್ಧಿ ಆಧಾರಿತವಾಗಿದ್ದು, ಈ ಬಜೆಟ್ ರಾಜ್ಯದ ಎಲ್ಲಾ ಪ್ರಮುಖ ಕ್ಷೇತ್ರಗಲ್ಲಿನ ನಿರೀಕ್ಷೆಗಳನ್ನು ಪೂರೈಸಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಗುರುವಾರ ಹೇಳಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಮುಖ್ಯಮಂತ್ರಿಗಳು, ಕೇಂದ್ರದ ಪ್ರಸಕ್ತ ಸಾಲನ ಬಜೆಟ್ ಅಭಿವೃದ್ಧಿಗೆ ಆಧಾರಿತವಾಗಿದೆ. ಫೆಬ್ರವರಿ 17 ರಂದು ರಾಜ್ಯದಲ್ಲಿ ಬಜೆಟ್ ಮಂಡನೆಯಾಗಲಿದ್ದು, ರಾಜ್ಯದಲ್ಲಿ ಘೋಷಣೆಯಾಗಿರುವ ಯೋಜನೆಗಳಿಗೆ ಹೊಂದಾಣಿಯಾಗುವ ರೀತಿಯಲ್ಲಿ ಅನುದಾನ ನೀಡುವುದು ನಮ್ಮ ಮುಂದಿರುವ ದೊಡ್ಡ ಸವಾಲಾಗಿದೆ ಎಂದು ಹೇಳಿದ್ದಾರೆ.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದ 5,300 ಕೋಟಿ ರೂ.ಗಳ ನೆರವನ್ನು ಯಾವುದೇ ಷರತ್ತುಗಳಿಲ್ಲದೆ ನೀಡಲಾಗುವುದು. ರಾಜ್ಯ ಸರ್ಕಾರದ ನಿರೀಕ್ಷೆಯಂತೆ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿದ ಕೇಂದ್ರ ಬಜೆಟ್‌ನಲ್ಲಿ ಗ್ರಾಮೀಣಾಭಿವೃದ್ಧಿ, ಕೃಷಿ, ರೈಲ್ವೆ ಮತ್ತು ಮೂಲಸೌಕರ್ಯಗಳಂತಹ ಆದ್ಯತೆಯ ಕ್ಷೇತ್ರಗಳಿಗೆ ರಾಜ್ಯ ಬಜೆಟ್ ನಲ್ಲಿ ಒತ್ತು ನೀಡಲಾಗಿದೆ.

ಕೃಷಿ ಮತ್ತು ಗ್ರಾಮೀಣ ಮೂಲಸೌಕರ್ಯಗಳಂತಹ ಕ್ಷೇತ್ರಗಳಿಗೆ ಹೆಚ್ಚಿನ ಅನುದಾನವನ್ನು ಪಡೆಯುವುದು ನಮ್ಮ ಬೇಡಿಕೆಯಾಗಿತ್ತು. ಗ್ರಾಮೀಣ ಮೂಲಸೌಕರ್ಯಕ್ಕೆ ಆದ್ಯತೆ ನೀಡುವಂತೆ ಈ ಹಿಂದೆ ಕೇಂದ್ರ ಬಳಿ ಮನವಿ ಮಾಡಿಕೊಂಡಿದ್ದೆವು.

ಜಲ ಜೀವನ್ ಮಿಷನ್ ಮತ್ತು ಪ್ರಧಾನಮಂತ್ರಿ ಆವಾಸ್ ಯೋಜನೆ ಮೂಲಕ ಈ ಬೇಡಿಕೆಯನ್ನು ಈಡೇರಿಸಲಾಗಿದೆ ಎಂದು ತಿಳಿಸಿದರು.

ಬಳಿಕ ಕಾಂಗ್ರೆಸ್ ವಿರುದ್ಧ ಕಿಡಿಕಾರಿದ ಅವರು, ಮೇಕೆದಾಟು ಯೋಜನೆಗೆ ಸಂಬಂಧಿಸಿದಂತೆ, ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧಪಡಿಸುವ ಆರಂಭಿಕ ಹಂತದಲ್ಲಿ ಅಂದಿನ ಕಾಂಗ್ರೆಸ್ ಸರ್ಕಾರ ತಪ್ಪು ಮಾಡಿದೆ. "ಅವರು ಡಿಪಿಆರ್ ಸಿದ್ಧಪಡಿಸಿದಾಗ, ಯಾವುದೇ ಸಮಸ್ಯೆಗಳಿರಲಿಲ್ಲ ಎಂದು ಹೇಳಿದ್ದರು ... ಆದರೆ, ಈಗ ಅದು ಸುಪ್ರೀಂ ಕೋರ್ಟ್‌ನಲ್ಲಿದೆ. ನಮ್ಮ ಸರ್ಕಾರ ಯೋಜನೆಗೆ ಈಗಾಗಲೇ ಹಣ ಮಂಜೂರು ಮಾಡಿದೆ. ಸುಪ್ರೀಂ ಕೋರ್ಟ್ ಅನುಮತಿ ನೀಡಿದರೆ (ಯೋಜನೆಯೊಂದಿಗೆ ಮುಂದುವರಿಯಲು) ಕಾಮಗಾರಿ ಕೆಲಸಗಳನ್ನು ಆರಂಭಿಸಲಾಗುತ್ತದೆ ಎಂದರು.

ಕೇಂದ್ರ ಬಜೆಟ್‌ನಲ್ಲಿ ಹಲವು ಯೋಜನೆಗಳಿಗೆ ಅನುದಾನ ಹೆಚ್ಚಿಸಲಾಗಿದೆ. "ಯುವಕರಿಗೆ ಕೌಶಲ್ಯಾಭಿವೃದ್ಧಿ ನಮ್ಮ ಕಾಳಜಿಗಳಲ್ಲಿ ಒಂದಾಗಿತ್ತು... ಬಜೆಟ್'ನಲ್ಲಿ ಅದಕ್ಕೆ ಆದ್ಯತೆ ನೀಡಲಾಗಿದೆ. ರೈಲ್ವೆಗೆ 2.4 ಲಕ್ಷ ಕೋಟಿ ರೂ. ನೀಡಲಾಗಿದೆ.

ಅಲ್ಲದೆ, ಮನ್ರೇಗಗೆ ನೀಡಲಾಗಿರುವ ಅನುದಾನ ಹಂಚಿಕೆಯಲ್ಲಿ ಕಡಿತ ಮಾಡಿಲ್ಲ. ಇಂತಹ ಕ್ರಮಗಳು ಕರ್ನಾಟಕಕ್ಕೆ ಸಹಕಾರಿಯಾಗಲಿವೆ ಎಂದರು.

ನಮ್ಮ ಮೆಟ್ರೋ ಕಾಮಗಾರಿ ಕುರಿತು ಮಾತನಾಡಿ, ಬೆಂಗಳೂರು ಗ್ರಾಮಾಂತರ ಪ್ರದೇಶಗಳಿಗೆ ಮೆಟ್ರೋ ಸೇವೆ ಒದಗಿಸುವ ಹಂತ-4ಕ್ಕೆ ಸರ್ಕಾರ ಡಿಪಿಆರ್ ಸಿದ್ಧಪಡಿಸುತ್ತಿದೆ ಎಂದು ಮಾಹಿತಿ ನೀಡಿದರು.

ಇದೇ ವೇಳೆ ಭದ್ರಾ ಮೇಲ್ದಂಡೆ ಯೋಜನೆಗೆ 5,300 ಕೋಟಿ ಅನುದಾನ ಮಂಜೂರು ಮಾಡಿದ್ದಕ್ಕಾಗಿ ಕೇಂದ್ರದ ಬಜೆಟ್ ಅನ್ನು ಮುಖ್ಯಮಂತ್ರಿಗಳು ಶ್ಲಾಘಿಸಿದರು.

1960 ರ ದಶಕದಿಂದಲೂ ಈ ಯೋಜನೆಗೆ ಬೇಡಿಕೆ ಇತ್ತು, ಆದರೆ 2008 ರಲ್ಲಿ ಬಿಎಸ್ ಯಡಿಯೂರಪ್ಪ ನೇತೃತ್ವದ ಬಿಜೆಪಿ ಆಡಳಿತದಲ್ಲಿ ಯೋಜನೆ ಪ್ರಾರಂಭಿಸಲಾಯಿತು. ಭದ್ರಾ ಮೇಲ್ದಂಡೆ ಯೋಜನೆಗೆ ಇಂದು 'ರಾಷ್ಟ್ರೀಯ ಯೋಜನೆ' ಸ್ಥಾನಮಾನ ನೀಡಲಾಗಿದೆ. ಯಾವುದೇ ಷರತ್ತುಗಳಿಲ್ಲದೆ ಮೋದಿ ಸರ್ಕಾರ ಬಜೆಟ್‌ನಲ್ಲಿ 5,300 ಕೋಟಿ ರೂ. ನೀಡಿದೆ ಎಂದು ಬಜೆಟ್‌ನಲ್ಲಿನ ಘೋಷಣೆಯ ಬಗ್ಗೆ ಪ್ರತಿಪಕ್ಷಗಳ ಟೀಕೆಗಳಿಗೆ ತಿರುಗೇಟು ನೀಡಿದರು.

ಬೆಂಗಳೂರಿನ ಟ್ರಾಫಿಕ್‌ಗೆ ಮತ್ತೊಂದು ಬಲಿ

ಬೆಂಗಳೂರು: ಹಾಸನದಿಂದ ಬೆಂಗಳೂರಿಗೆ ಚಿಕಿತ್ಸೆಗೆಂದು ಕರೆತರುತ್ತಿದ್ದ ಒಂದೂವರೆ ವರ್ಷದ ಮಗು ಮಾರ್ಗಮಧ್ಯೆಯೇ ಮೃತಪಟ್ಟಿದೆ. ರಾಷ್ಟ್ರೀಯ ಹೆದ್ದಾರಿಯ ನೆಲಮಂಗಲದಿಂದ ಗೊರಗುಂಟೆಪಾಳ್ಯದವರೆಗಿನ ಮುಖ್ಯರಸ್ತೆಯಲ್ಲಿ ಗುರುವಾರ ಉಂಟಾಗಿದ್ದ ವಿಪರೀತ ದಟ್ಟಣೆಯಲ್ಲಿ ಆಂಬುಲೆನ್ಸ್ ಸಿಲುಕಿತ್ತು.

ಸೂಕ್ತ ಸಮಯದಲ್ಲಿ ಮಗುವನ್ನು ಆಸ್ಪತ್ರೆಗೆ ದಾಖಲಿಸದಿದ್ದರಿಂದ ಮೃತಪಟ್ಟಿರುವುದಾಗಿ ಸಂಬಂಧಿಕರು ಆರೋಪಿಸಿದ್ದಾರೆ. ಅಪಘಾತದಲ್ಲಿ ಗಾಯಗೊಂಡಿದ್ದ ಒಂದೂವರೆ ವರ್ಷದ ಮಗು ಹುದಾ ಕೌಸರ್ ನೆಲಮಂಗಲ ಬಳಿ ಟ್ರಾಫಿಕ್ ಜಾಮ್ನಲ್ಲಿ ಸಿಲುಕಿಕೊಂಡು ಸರಿಯಾದ ಸಮಯಕ್ಕೆ ಆಸ್ಪತ್ರೆಗೆ ಹೋಗಲಾಗದೆ ಚಿಕಿತ್ಸೆ ಪಡೆಯಲಾಗದೆ ಮೃತಪಟ್ಟಿದೆ. ಹಾಸನದಲ್ಲಿ ಗುರುವಾರ ಅಪಘಾತ ಸಂಭವಿಸಿತ್ತು. ಗಾಯಗೊಂಡಿದ್ದ ಮಗುವನ್ನು ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ನಿಮ್ಹಾನ್ಸ್ ಆಸ್ಪತ್ರೆಗೆ ಕರೆತರಲಾಗುತ್ತಿತ್ತು.

ಹಾಸನದಿಂದ ಹೊರಡುವ ಮುನ್ನ ಸಾಮಾಜಿಕ ಮಾಧ್ಯಮಗಳಲ್ಲಿ ಪೋಸ್ಟ್ ಪ್ರಕಟಿಸಿದ್ದ ಚಾಲಕ ಮದುಸೂದನ್, 'ಮಗುವನ್ನು ಆಸ್ಪತ್ರೆಗೆ ಕರೆದೊಯ್ಯಲು ದಟ್ಟಣೆ ಹಾಗೂ ಸಿಗ್ನಲ್ ಮುಕ್ತ ರಸ್ತೆ ವ್ಯವಸ್ಥೆ ಕಲ್ಪಿಸಿ' ಎಂದು ಪೊಲೀಸರನ್ನು ಕೋರಿದ್ದರು.

ಹಾಸನ ಬಿಟ್ಟಿದ್ದ ಅಂಬುಲೆನ್ಸ್ ನೆಲಮಂಗಲಕ್ಕೆ ಬರುತ್ತಿದ್ದಂತೆ ದಟ್ಟಣೆಯಲ್ಲಿ ಸಿಲುಕಿತ್ತು. ನಿಗದಿತ ಸಮಯಕ್ಕೆ ನಗರ ಪ್ರವೇಶಿಸಲು ಸಾಧ್ಯವಾಗಿರಲಿಲ್ಲ. ಹೀಗಾಗಿ, ಆಂಬುಲೆನ್ಸ್‌ನಲ್ಲೇ ಮಗು ಮೃತಪಟ್ಟಿದೆ ಎಂದು ಸ್ಥಳೀಯರು ತಿಳಿಸಿದರು.

ಮಗು ಮೃತಪಟ್ಟ ಸುದ್ದಿ ತಿಳಿಯುತ್ತಿದ್ದಂತೆ ರಾಷ್ಟ್ರೀಯ ಹೆದ್ದಾರಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿದ್ದರು. ಮಗುವನ್ನು ಆಸ್ಪತ್ರೆಗೆ ಸೇರಿಸಲು ವ್ಯವಸ್ಥೆ ಕಲ್ಪಿಸದ ಪೊಲೀಸರ ವಿರುದ್ಧ ಆಕ್ರೋಶ ಹೊರಹಾಕಿದರು.

ನದಿಯಲ್ಲಿ ಆಟವಾಡುತ್ತಿದ್ದ 9 ವರ್ಷದ ಬಾಲಕನ ಮೇಲೆ ಮೊಸಳೆ ದಾಳಿ, ಗಂಭೀರ ಗಾಯ

ರಾಯಚೂರು: ರಾಯಚೂರು ಜಿಲ್ಲೆಯಲ್ಲಿ ಶುಕ್ರವಾರ ಒಂಬತ್ತು ವರ್ಷದ ಬಾಲಕನ ಮೇಲೆ ಮೊಸಳೆ ದಾಳಿ ನಡೆಸಿದ್ದು, ಸ್ಥಳೀಯರ ತ್ವರಿತ ಪ್ರತಿಕ್ರಿಯೆಯಿಂದ ಆತನನ್ನು ಅಪಾಯದಿಂದ ರಕ್ಷಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಪವನ್ ಎಂದು ಗುರುತಿಸಲಾದ ಬಾಲಕ ಕೊರ್ಟಗುಂಡ ಗ್ರಾಮದ ಬಳಿ ನದಿಯಲ್ಲಿ ಆಟವಾಡುತ್ತಿದ್ದಾಗ ಈ ಘಟನೆ ಸಂಭವಿಸಿದೆ.

ಸ್ಥಳೀಯವಾಗಿ ನಡೆಯುವ ಧಾರ್ಮಿಕ ಜಾತ್ರೆಯೊಂದರಲ್ಲಿ ಪಾಲ್ಗೊಳ್ಳಲು ಪವನ್ ತನ್ನ ಅಜ್ಜಿಯ ಮನೆಗೆ ಬಂದಿದ್ದನು. ಕುಟುಂಬ ಸದಸ್ಯರೊಂದಿಗೆ ನದಿಗೆ ತೆರಳಿದ್ದನು. ಅವರು ನದಿಯ ದಡದಲ್ಲಿ ಬಟ್ಟೆ ಒಗೆಯುತ್ತಿದ್ದಾಗ ಆಟವಾಡಲು ನದಿಗೆ ತೆರಳಿದ್ದ ವೇಳೆ ಮೊಸಳೆ ದಾಳಿ ನಡೆಸಿದೆ.

ಆದಾಗ್ಯೂ, ಮೊಸಳೆ ಹುಡುಗನ ಬಳಿಗೆ ಬರುತ್ತಿರುವುದನ್ನು ಕಂಡ ಸ್ಥಳೀಯರು ಸ್ಥಳಕ್ಕೆ ಧಾವಿಸಿ, ಜೋರಾಗಿ ಕೂಗಿದ್ದಾರೆ ಮತ್ತು ಮೊಸಳೆಯನ್ನು ಓಡಿಸಲು ವಸ್ತುಗಳನ್ನು ನದಿಗೆ ಎಸೆದಿದ್ದಾರೆ. ಘಟನೆಯಲ್ಲಿ ಪವನ್ ಗಂಭೀರವಾಗಿ ಗಾಯಗೊಂಡಿದ್ದು, ಸ್ಥಳೀಯರು ಆತನ ಪ್ರಾಣ ಉಳಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಸದ್ಯ ಬಾಲಕನನ್ನು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಗೆ (ರಿಮ್ಸ್) ದಾಖಲಿಸಲಾಗಿದ್ದು, ಆತ ಅಪಾಯದಿಂದ ಪಾರಾಗಿದ್ದಾನೆ ಎಂದು ವೈದ್ಯರು ತಿಳಿಸಿದ್ದಾರೆ.

ಕಾಂಗ್ರೆಸ್ ಕಾರ್ಯರೂಪಕ್ಕೆ ಬರುತ್ತಿದೆ; ಪಕ್ಷವು 'ಆರಾಮಾಗಿ' ಚುನಾವಣೆ ಗೆಲ್ಲುತ್ತದೆ: ಡಿಕೆಶಿ

ಬೆಂಗಳೂರು: ರಾಜ್ಯದಲ್ಲಿ ನಡೆಯಲಿರುವ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ನಿರಾಯಾಸವಾಗಿ 136 ಸ್ಥಾನಗಳನ್ನು ಗೆಲ್ಲುವುದಾಗಿ ಕಾಂಗ್ರೆಸ್ ಶುಕ್ರವಾರ ಘೋಷಿಸಿದೆ.

ಇದೇ ವೇಳೆ ರಾಜ್ಯ ಕಾಂಗ್ರೆಸ್ ಅಧ್ಯಕ್ಷ ಡಿಕೆ ಶಿವಕುಮಾರ್ ಮತ್ತು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ರಾಜ್ಯದ ದಕ್ಷಿಣ ಹಾಗೂ ಉತ್ತರ ಭಾಗಗಳಲ್ಲಿ ಪ್ರತ್ಯೇಕವಾಗಿ ಬಸ್ ಯಾತ್ರೆ ಆರಂಭಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಡಿಕೆ ಶಿವಕುಮಾರ್, '50 ದಿನ ಕಳೆದರೆ ಬಿಜೆಪಿ ಸರ್ಕಾರ ಇರುವುದಿಲ್ಲ, 50 ದಿನಗಳ ನಂತರ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಲಿದೆ. ಎಲ್ಲಾ ಕ್ಷೇತ್ರಗಳಲ್ಲಿ ಎರಡೂರು ಭಾರಿ ಸಮೀಕ್ಷೆ ನಡೆಸಿದ್ದೇವೆ. ಜನರ ಪ್ರತಿಕ್ರಿಯೆ ಆರೋಗ್ಯಕರವಾಗಿದೆ. ನಾವು 136 ಸ್ಥಾನಗಳನ್ನು ಆರಾಮಾಗಿ ಗೆಲ್ಲುತ್ತೇವೆ ಎಂದು ಅವರು ಹೇಳಿದರು.

ವಿಧಾನಸಭಾ ಚುನಾವಣೆಗೆ ಅಭ್ಯರ್ಥಿಗಳ ಪಟ್ಟಿಯನ್ನು ಅಂತಿಮಗೊಳಿಸುವ ಸಭೆಯು ಯಾವುದೇ ಆಕ್ಷೇಪಣೆ ಅಥವಾ ಮುಖಂಡರ ಅಸಮಾಧಾನವಿಲ್ಲದೆ ಸುಗಮವಾಗಿ ನಡೆಯಿತು ಎಂದು ಅವರು ಹೇಳಿದರು.

ಸಿದ್ದರಾಮಯ್ಯ ರಾಜ್ಯಕ್ಕೆ ಇದುವರೆಗೆ 13 ಬಜೆಟ್ ಮಂಡಿಸಿದ್ದಾರೆ. 'ನಾನು 16 ವರ್ಷಗಳಿಂದ ಸರ್ಕಾರದ ಭಾಗವಾಗಿದ್ದೇನೆ. ರಾಜ್ಯದ ಕುಟುಂಬದ ಪ್ರತಿ ಮಹಿಳಾ ಮುಖ್ಯಸ್ಥರಿಗೆ ಮತ್ತು ಇತರರಿಗೆ ರೂ 2,000 ಒದಗಿಸುವ ನಮ್ಮ ಭರವಸೆಗಾಗಿ ನಾವು ಆದಾಯವನ್ನು ಗಳಿಸುವ ಕಲ್ಪನೆಯನ್ನು ಹೊಂದಿದ್ದೇವೆ' ಎಂದು ಅವರು ಹೇಳಿದರು.

ಕಾಂಗ್ರೆಸ್ ಪಕ್ಷವು ತನ್ನ ಎರಡನೇ ಹಂತದ ಬಸ್ ಯಾತ್ರೆಯನ್ನು ರಾಜ್ಯದಲ್ಲಿ ಶುಕ್ರವಾರ ಆರಂಭಿಸಿದೆ. ಶಿವಕುಮಾರ್ ಕೋಲಾರದ ಮುಳಬಾಗಲು ಸಮೀಪದ ಕುರುಡುಮಲೆಯಿಂದ ಯಾತ್ರೆ ಆರಂಭಿಸಿದ್ದಾರೆ. ಸಿದ್ದರಾಮಯ್ಯ ಉತ್ತರ ಕರ್ನಾಟಕದ ಬಸವಕಲ್ಯಾಣದಿಂದ ಯಾತ್ರೆ ಆರಂಭಿಸಿ ಪ್ರವಾಸ ಕೈಗೊಳ್ಳುತ್ತಿದ್ದಾರೆ.

ದೇವದಾರಿ ಕಬ್ಬಿಣದ ಅದಿರು ಪ್ರದೇಶದಲ್ಲಿ ಗಣಿಗಾರಿಕೆಗೆ ಕೆಐಒಸಿಎಲ್ ಅನುಮತಿ

ಮಂಗಳೂರು: ಬಳ್ಳಾರಿ ಜಿಲ್ಲೆಯ ಸಂಡೂರಿನ ದೇವದಾರಿ ಕಬ್ಬಿಣದ ಅದಿರು ಪ್ರದೇಶದಲ್ಲಿ ಕಬ್ಬಿಣ ಮತ್ತು ಮ್ಯಾಂಗನೀಸ್ ಅದಿರು ಗಣಿಗಾರಿಕೆ ನಡೆಸಲು ಕುದುರೆಮುಖ ಕಬ್ಬಿಣ ಅದಿರು ಕಂಪನಿ ಲಿಮಿಟೆಡ್(ಕೆಐಒಸಿಎಲ್) ಗೆ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಅನುಮತಿ ನೀಡಿದೆ ಎಂದು ಕೆಐಒಸಿಎಲ್ ಲಿಮಿಟೆಡ್‌ನ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಟಿ ಸ್ವಾಮಿನಾಥನ್ ಅವರು ಶುಕ್ರವಾರ ತಿಳಿಸಿದ್ದಾರೆ.

ಮಂಗಳೂರಿನಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ ಸ್ವಾಮಿನಾಥನ್, 388 ಹೆಕ್ಟೇರ್ ಅರಣ್ಯ ಪ್ರದೇಶದಲ್ಲಿ ಕಬ್ಬಿಣದ ಅದಿರು ಮತ್ತು ಮ್ಯಾಂಗನೀಸ್ ಅದಿರು ಗಣಿಗಾರಿಕೆ ನಡೆಸಲು ಕೇಂದ್ರ ಸಚಿವಾಲಯ ಅಂತಿಮ ಅನುಮತಿ ನೀಡಿದೆ ಎಂದರು.

2006 ರಲ್ಲಿ ಸುಪ್ರೀಂ ಕೋರ್ಟ್ ಆದೇಶದ ನಂತರ ಪಶ್ಚಿಮ ಘಟ್ಟಗಳ ಕುದುರೆಮುಖದಲ್ಲಿ ಮ್ಯಾಗ್ನೆಟೈಟ್ ಕಬ್ಬಿಣದ ಅದಿರು ಗಣಿಗಾರಿಕೆಯನ್ನು ನಿಲ್ಲಿಸಬೇಕಾಯಿತು. ಆದರೆ ಈಗ ಗಣಿಗಾರಿಕೆ ನಡೆಸಲು ಸಚಿವಾಲಯ ಅನುಮತಿ ನೀಡಿದೆ" ಎಂದು ಸ್ವಾಮಿನಾಥನ್ ತಿಳಿಸಿದರು.

ದೇವದಾರಿ ಕಬ್ಬಿಣದ ಅದಿರಿನ ಗಣಿಗಾರಿಕೆಗೆ ಗುತ್ತಿಗೆಗೆ ಕರ್ನಾಟಕ ಗಣಿ ಮತ್ತು ಭೂವಿಜ್ಞಾನ ಇಲಾಖೆ ನಿರ್ದೇಶಕರು 2023 ರ ಜನವರಿ 2 ರಂದು 50 ವರ್ಷಗಳ ಅವಧಿಗೆ ಒಪ್ಪಿಗೆ ನೀಡಿದೆ ಎಂದು ಸಮಿನಾಥನ್ ಹೇಳಿದ್ದಾರೆ.

ನಾವು ನೋಂದಣಿ ಮತ್ತು ಇತರ ಕಾರ್ಯವಿಧಾನಗಳಿಗಾಗಿ 329.17 ಕೋಟಿ ರೂಪಾಯಿ ಪಾವತಿಸಿದ್ದೇವೆ ಮತ್ತು ಈ ಗುತ್ತಿಗೆ ಅವಧಿಯಲ್ಲಿ, ಕಂಪನಿಗೆ ನಿಗದಿಪಡಿಸಿದ ಪ್ರದೇಶದಲ್ಲಿ 30 ಮಿಲಿಯನ್ ಟನ್‌ಗಳಿಂ

ಕನ್ನಡನಾಡಿನ ಗತ ವೈಭವದ ಶ್ರೇಷ್ಠತೆ ಹೆಚ್ಚಿಸಿದ ಒಕ್ಕುಂದ ಗ್ರಾಮ

ಬೈಲಹೊಂಗಲ: ತಿರುಳ್ಗನ್ನಡನಾಡು ಒಕ್ಕುಂದ ಗ್ರಾಮ ಧಾರ್ಮಿಕ, ಸಾಹಿತ್ಯ, ಕಲೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ತನ್ನದೇ ಆದ ಹಿರಿಮೆಯನ್ನು ಹೊಂದಿದೆ ಎಂದು ಬೆಳಗಾವಿ ಖ್ಯಾತ ವಿಮರ್ಶಕಿ ಶ್ರೀಮತಿ ಡಾ. ಮೈತ್ರೇಯಿಣಿ ಗದಿಗೆಪ್ಪಗೌಡರ ಹೇಳಿದರು.

ತಾಲೂಕಿನ ಒಕ್ಕುಂದ ಗ್ರಾಮದಲ್ಲಿ ತಿರುಳ್ಗನ್ನಡನಾಡು ಒಕ್ಕುಂದ ಉತ್ಸವ ಸಮಿತಿ ಹಾಗೂ ಕನ್ನಡ ಮತ್ತು ಇಲಾಖೆ ವತಿಯಿಂದ ತಿರುಳ್ಗನ್ನಡನಾಡು ಒಕ್ಕುಂದ ಉತ್ಸವ 2023 ಗ್ರಾಮದ ಪ್ರಾಥಶಾಲಾ ಭವ್ಯ ಮೈದಾನದಲ್ಲಿ ನಡೆದ ಸಮಾರಂಭದ ವಿಶೇಷ ಉಪನ್ಯಾಸಕಾಗಿ ಮಾತನಾಡಿ, ಕನ್ನಡದ ಮೊಟ್ಟ ಮೊದಲ ಆದ್ಯ ಗ್ರಂಥ ಕವಿರಾಜಮಾರ್ಗದಲ್ಲಿ ಉಲ್ಲೇಖಿತವಾದಂತೆ ತಿರುಳ್ಗನ್ನಡದ ನಾಲ್ಕು ಊರು ಪಟ್ಟಣದಕಲ್ಲು, ಕೊಪ್ಪಳ, ಲಕ್ಷ್ಮೇಶ್ವರ ಮತ್ತು ಒಕ್ಕುಂದ ಈ ಗ್ರಾಮ ಕನ್ನಡನಾಡಿನ ಗತವೈಭವದ ಶ್ರೇಷ್ಠತೆಯನ್ನು ಹೆಚ್ಚಿಸಿದೆ. ಅಂದಿಗೂ ಇಂದಿಗೂ ಆ ವೈಶಿಷ್ಯದ ಅಮರ ಶಿಲ್ಪ ಕೆಲೆಯನ್ನು ಸಾರುವ ಸುಂದರವಾದ ತ್ರಿಕೊಟೇಶ್ವರ (ಕಲ್ಲಗುಡಿ) ದೇವಾಲಯಗಳು ಇಲ್ಲಿವೆ ಎಂದರು.

ತುಂಬಾ ಸ್ಪಷ್ಟವಾದ, ಗಟ್ಟಿಯಾದ ತೀವ್ರತರವಾದ, ಅಪಭ್ರಮ್ಶ ಇಲ್ಲದಿರುವ ಕನ್ನಡ ಎಂದರ್ಥ 9ನೇ ಶತಮಾನದಲ್ಲಿ ಬಹುತೇಕ ಒಕ್ಕುಂದ ಗ್ರಾಮವು ಒಂದು ಮೆಟ್ರೋಪಾಲಿಟಿನ್ ಪ್ರದೇಶವಾಗಿತ್ತು. ಎಲ್ಲ ವಸಾಹುತಶಾಹಿಗಳಿಗೆ ವಾಣಿಜ್ಯ ಕೇಂದ್ರವಾಗಿತ್ತು. ಭಾಷಿಕ ಆಯಾಮದ ಜತೆಗೆ ಗಡಿ ವಿವಾದ ಕೆದಕುತ್ತಿರುವ ಇಂದಿನ ಪರಿಸ್ಥಿತಿಯಲ್ಲಿ ಗಟ್ಟಿಯಾಗಿ ಬೆಳಗಾವಿ ಕರ್ನಾಟಕದಲ್ಲೇ ಉಳಿಸಿಕೊಳ್ಳಲು ವಿಜಯನ ಕವಿರಾಜಮಾರ್ಗ ಅತ್ಯಂತ ಪ್ರಮುಖ ದಾಖಲೆಯಾಗಿದೆ. ಕಲ್ಯಾಣ ಕ್ರಾಂತಿಗೂ ಈ ನಾಡಿಗೂ ಅವಿನಾಭಾವ ಸಂಬಂದ ಹೊಂದಿದೆ. ಬಸವಾದಿ ಶರಣರು ನಡೆದುಕೊಂಡು ಉಳಿವಿಗೆ ಹೋಗಿರುವ ಈ ನಾಡು ಇದು. ಒಕ್ಕುಂದ ಪ್ರತಿನಿಧಿಸುವ ಪ್ರತಿಯೊಬ್ಬರಿಗೂ ತಮ್ಮೂರಿನ ಅಭಿಮಾನ ಹೊಂದಿರಬೇಕು ಎಂದರು.

ಒಕ್ಕುಂದ ಗ್ರಾಮಕ್ಕೆ ರಾಷ್ಟ್ರಕೂಟರ ಆಳ್ವಿಕೆಯ 8 ನೇ ಶತಮಾನದ ಕವಿರಾಜ ಮಾರ್ಗ ಗ್ರಂಥದಲ್ಲಿ ಒಕ್ಕುಂದ ಉಲ್ಲೇಖವಿದ್ದು, 12 ನೇ ಶತಮಾನದ ಸವದತ್ತಿ ರಟ್ಟರ ಕಾಲದಲ್ಲಿ ಐತಿಹಾಸಿಕ ತ್ರಿಕೂಟೇಶ್ವರ ದೇವಾಲಯ ನಿರ್ಮಾಣವಾಗಿದ್ದು, ಅಂದು ಅದು ಜೈನ ಬಸೀದಿಯಾಗಿತ್ತು ಇಲ್ಲಿನ ಸಾವಿರಾರು ವರ್ಷಗಳಷ್ಟು ಹಳೆಯದಾದ ಇತಿಹಾಸವನ್ನು ಗ್ರಾಮದ ಉತ್ಸಾಹಿ ಯುವಕರು ಸೇರಿ–ಕೊಂಡು ಯುವಪೀಳಿಗೆ ಪರಿಚಯಿಸುವ ಕಾರ್ಯ ಅವಿಸ್ಮರಣಿಯವಾಗಿದೆ ಎಂದರು.

ಕಾಡಾ ಅಧ್ಯಕ್ಷ ಡಾ. ವಿಶ್ವನಾಥ ಪಾಟೀಲ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿ, ಗ್ರಾಮಸ್ಥರು ಆಚರಿಸುತ್ತಿರುವ ತಿರುಳ್ಗನ್ನಡನಾಡು ಒಕ್ಕುಂದ ಉತ್ಸವ ಸರಕಾರಿ ಉತ್ಸವವನ್ನಾಗಿಸಲು ಸರಕಾರದ ಮೇಲೆ ಒತ್ತಡ ತರಲಾಗುವುದು ಎಂದರು.

ಅತಿಥಿಯಾಗಿ ಬಿ. ಬಿ. ಗಣಾಚಾರಿ ಮಾತನಾಡಿ, ಕಲಗುಡಿ ಜೀರ್ಣೋದ್ಧಾರಕ್ಕೆ ಪುರಾತತ್ವ ಇಲಾಖೆಯಿಂದ ಅನುದಾನ ಬಿಡುಗಡೆ ಆಗುವುದಿದೆ ಎನ್ನುವುದು ಬೇಡ. ಇಷ್ಟು ದಿನ ನಿರ್ಲಕ್ಷ್ಯ ಮಾಡಿದ್ದು ಸಾಕು, ಇನ್ಮುಂದೆಯಾದರೂ ಇತ್ತ ಗಮನಹರಿಸಿ, ತಕ್ಷಣವೇ ಒಕ್ಕುಂದ ಗ್ರಾಮವನ್ನು ಪ್ರಸಿದ್ಧ ಪ್ರವಾಸಿತಾಣ ಮಾಡುವಂತೆ ಆಗ್ರಹಿಸಿದರು.

ಒಕ್ಕುಂದ ರಾಚೋಟಿ ಸ್ವಾಮೀಜಿ, ನಯಾನಗರದ ಅಭಿನವ ಸಿದ್ಧಲಿಂಗ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸಿ, ಆಶೀರ್ವಚನ ನೀಡಿದರು. ಗ್ರಾಪಂ. ಅಧ್ಯಕ್ಷೆ ಸವಿತಾ ಹೂವಿನ ಅಧ್ಯಕ್ಷತೆ ವಹಿಸಿದ್ದರು. ಅಬಕಾರಿ ಪಿಎಸ್ಐ ನಾಗರಾಜ ಕೋಟಗಿ, ಉತ್ಸವ ಸಮಿತಿ ಗೌರವ ಅಧ್ಯಕ್ಷ ಸಿ.ಕೆ.ಮೆಕ್ಕೇದ, ನಿವೃತ್ತ ಉಪತಹಶೀಲ್ದಾರ ಎಸ್.ಆರ್.ಕಮ್ಮಾರ, ಶಂಕರ ಮಾಡಲಗಿ ಮಾತನಾಡಿದರು. ವೇದಿಕೆಯ ಮೇಲೆ ಸಿ.ಪಿ.ಐ. ಮಹಾಂತೇಶ ಹೊಳಿ, ಗ್ರಾಪಂ. ಉಪಾಧ್ಯಕ್ಷ ಸುಭಾಷ ಮೆಕ್ಕೇದ, ಅಶೋಕ ಜಂತಿ, ಉಪಾಧ್ಯಕ್ಷ ಶಂಕರ ಕೋಟಗಿ, ಅಶೋಕ ಭದ್ರಶೆಟ್ಟಿ, ಪರ್ವತಗೌಡ ಪಾಟೀಲ, ರಾಮನಗೌಡ ಪಾಟೀಲ, ಸಂಗಣ್ಣ ಭದ್ರಶೆಟ್ಟಿ, ಜಿ. ಎಮ್. ಸುತಗಟ್ಟಿ, ಮಡಿವಾಳಪ್ಪ ತಡಸಲ, ಕಾಶಪ್ಪ ಭದ್ರಶೆಟ್ಟಿ ಇದ್ದರು.

ಈ ಸಂದರ್ಭದಲ್ಲಿ ಸಾವಿರಾರು ಗ್ರಾಮಸ್ಥರು ಇದ್ದರು. ಉತ್ಸವ ಸಮಿತಿ ಸ್ವಾಗತ ಸಮಿತಿ ಅಧ್ಯಕ್ಷ ಡಾ. ಸಿ. ಬಿ. ಗಣಾಚಾರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕ ಜಿ. ಸಿ. ಪಾಟೀಲ ನಿರೂಪಿಸಿದರು. ಅಧ್ಯಕ್ಷ ಬಸನಗೌಡ ಪೊಲೀಸ್ ಪಾಟೀಲ ಸ್ವಾಗತಿಸಿದರು. ಸಿದ್ದನಗೌಡ ಪಾಟೀಲ ವಂದಿಸಿದರು. ಸಾಂಸ್ಕೃತಿಕ ಕಾರ್ಯಕ್ರಮಗಳು ಜನಮನ ಸೆಳೆದವು.

ಮಹಾನಗರ ಪಾಲಿಕೆಯ ಮಹಾಪೌರ ಹಾಗೂ ಉಪಮಹಾಪೌರರ ಸ್ಥಾನಗಳಿಗೆ ಚುನಾವಣೆ

ಬೆಳಗಾವಿ : ಮಹಾನಗರ ಪಾಲಿಕೆಯ 21 ನೇ ಅವಧಿಗೆ ಮಹಾಪೌರ ಹಾಗೂ ಉಪಮಹಾಪೌರರ ಸ್ಥಾನಗಳಿಗೆ ಚುನಾವಣೆಯನ್ನು ನಿಗದಿಪಡಿಸಲಾಗಿದ್ದು, ಫೆಬ್ರುವರಿ 6, 2023 ರಂದು ಮಧ್ಯಾಹ್ನ 3 ಗಂಟೆಗೆ ಬೆಳಗಾವಿಯ ಮಹಾನಗರ ಪಾಲಿಕೆ ಸಭಾಗೃಹದಲ್ಲಿ ಚುನಾವಣೆ ನಡೆಯಲಿದೆ.

ಮಹಾಪೌರರ ಸ್ಥಾನವು ಸಾಮಾನ್ಯ ಮಹಿಳೆಯರಿಗೆ ಹಾಗೂ ಉಪಮಹಾಪೌರ ಸ್ಥಾನವು ಹಿಂದುಳಿದ ವರ್ಗ–ಬ ಮಹಿಳೆಯರಿಗೆ ಮೀಸಲಾಗಿದೆ.

ಚುನಾವಣೆ ವೇಳಾಪಟ್ಟಿ:

ಫೆಬ್ರುವರಿ 6, 2023 ರಂದು ಮುಂಜಾನೆ 10 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಮಹಾಪೌರ, ಉಪಮಹಾಪೌರ ಸ್ಥಾನಗಳಿಗೆ ನಾಮಪತ್ರಗಳನ್ನು ಸ್ವೀಕರಿಸಲಾಗುವುದು. ಮಧ್ಯಾಹ್ನ 3 ಗಂಟೆಗೆ ಸಭೆ ಪ್ರಾರಂಭವಾಗುವುದು.

ಮಧ್ಯಾಹ್ನ 3 ಗಂಟೆಯ ನಂತರ ಮಹಾಪೌರ, ಉಪಮಹಾಪೌರ ಸ್ಥಾನಕ್ಕೆ ಚುನಾವಣೆ ಪ್ರಾರಂಭವಾಗಲಿದ್ದು, ನಾಮಪತ್ರಗಳ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳುವುದು, ಉಮೇದುವಾರರ ಪಟ್ಟಿ ಘೋಷಣೆ, ಅವಿರೋಧ ಆಯ್ಕೆಯಾದಲ್ಲಿ ಫಲಿತಾಂಶ ಘೋಷಣೆ, ಚುನಾವಣೆ ಅಗತ್ಯವಿದ್ದಲ್ಲಿ ಕೈ ಎತ್ತುವ ಮೂಲಕ ಮತದಾನ, ನಡವಳಿಕೆ ಪುಸ್ತಕದಲ್ಲಿ ಸದಸ್ಯರ ಸಹಿ ದಾಖಲಿಸುವುದು, ಹಾಗೂ ಮತಗಳ ಎಣಿಕೆ ಮತ್ತು ಫಲಿತಾಂಶ ಘೋಷಣೆ ಮಾಡಲಾಗುವುದು ಎಂದು ಅಧ್ಯಕ್ಷಾಧಿಕಾರಿಗಳು, ಮಹಾನಗರ ಪಾಲಿಕೆ(ಚುನಾವಣೆ) ಹಾಗೂ ಪ್ರಾದೇಶಿಕ ಆಯುಕ್ತರಾದ ಎಂ.ಜಿ. ಹಿರೇಮಠ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹುಳಿಯಾರಿಗೆ ಇಂದು ನಾಗಾಭರಣ, ಅರುಂದತಿನಾಗ್

ಹುಳಿಯಾರು: ಹುಳಿಯಾರು ಸಮೀಪದ ಕೋಡಿಪಾಳ್ಯದ ಧ್ಯಾನನಗರಿಗೆ ಖ್ಯಾತ ಸಿನಿಮಾ ನಿರ್ದೆಶಕ ಟಿ.ಎಸ್.ನಾಗಾಭರಣ ಹಾಗೂ ಖ್ಯಾತ ರಂಗಭೂಮಿ ಕಲಾವಿದೆ ಅರುಂದತಿನಾಗ್ ಅವರು ಆಗಮಿಸಲಿದ್ದಾರೆ ಎಂದು ಶ್ರೀ ಮಾತಾ ಛಾರಿಟಬಲ್ ಟ್ರಸ್ಟ್‌ನ ಅಧ್ಯಕ್ಷ ಗಂಗಾಧರ್ ಅವರು ತಿಳಿಸಿದ್ದಾರೆ.

ಹುಳಿಯಾರು ಸಮೀಪದ ಕೋಡಿಪಾಳ್ಯದ ಧ್ಯಾನನಗರಿಯಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿದ ಅವರು ರಂಗಕರ್ಮಿ ಶ್ರೀನಿವಾಸ್ ಜಿ ಕಪ್ಪಣ್ಣ ಅವರ 75 ನೇ ಹುಟ್ಟುಹಬ್ಬದ ಅಂಗವಾಗಿ ಶ್ರೀಮಾತಾ ಚಾರಿಟಬಲ್ ಟ್ರಸ್ಟ್ ಹಾಗೂ ಸೆಂಟರ್ ಸ್ಟೇಜ್ ಸಂಯುಕ್ತಾಶ್ರಯದಲ್ಲಿ ಫೆ.4 ರಂದು ಕಪ್ಪಣ್ಣ–75 ಸಾಂಸ್ಕೃತಿಕ ಸಂಭ್ರಮ, ಕಪ್ಪಣ್ಣ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮಕ್ಕೆ ಟಿ.ಎಸ್.ನಾಗಾಭರಣ ಹಾಗೂ ಈ ವರ್ಷದಿಂದ ಕಪ್ಪಣ್ಣ ಅವರ ಹೆಸರಿನಲ್ಲಿ ನೀಡಲಾಗುತ್ತಿರುವ ಕಪ್ಪಣ್ಣ ಸಾಂಸ್ಕೃತಿಕ ಪ್ರಶಸ್ತಿ ಸ್ವೀಕರಿಸಲು ರಂಗಭೂಮಿ ಕಲಾವಿದೆ ಅರುಂಧತಿ ನಾಗ್ ಹಾಗೂ ಜನಪದ ಕಲಾವಿದ ಹಿದಾಯತ್ ಅಹ್ಮದ್ ಅವರು ಆಗಮಿಸಲಿದ್ದಾರೆ ಎಂದು ತಿಳಿಸಿದರು.

ಈ ಸಂಭ್ರಮವನ್ನು ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಉದ್ಘಾಟಿಸಲಿದ್ದಾರೆ. ಅಧ್ಯಕ್ಷತೆಯನ್ನು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಎಸ್.ಜಿ.ಸಿದ್ದರಾಮಯ್ಯ ವಹಿಸಲಿದ್ದಾರೆ. ಮುಖ್ಯಅತಿಥಿಗಳಾಗಿ ಪ್ರೊ ಕೆ.ಈ.ರಾಧಾಕೃಷ್ಣ, ಗಿರಿಜಾ ಲೋಕೇಶ್ ಸೇರಿದಂತೆ ಮತ್ತಿತರರು ಭಾಗವಹಿಸಲಿದ್ದಾರೆ. ಇದೇ ವೇಳೆ ಕಪ್ಪಣ್ಣನವರ ಜೀವನ, ಸಂಘಟನೆ, ಅವರಿಗೆ ಸಂದ ಪುರಸ್ಕಾರ ಬಗ್ಗೆ ಛಾಯಾಚಿತ್ರ ಪ್ರದರ್ಶನ, ವಿವಿಧ ವಿಚಾರಗೋಷ್ಠಿ, ಜನಪದ ಗೀತೆಗಳ ಗಾಯನ ಸೇರಿದಂತೆ ವಿವಿಧ ಕಾರ್ಯಕ್ರಮಗಳು ಬೆಳಗ್ಗೆಯಿಂದ ಸಂಜೆಯವರೆಗೂ ನಡೆಯಲಿವೆ ಎಂದರು.

ಕಪ್ಪಣ್ಣರೊಂದಿಗೆ ರಂಗಕರ್ಮಿಗಳ ಸಂವಾದದಲ್ಲಿ ಸಂಯುಕ್ತ ಕರ್ನಾಟಕ ಸಮೂಹ ಸಂಪಾದಕ ಹುಣಸವಾಡಿ ರಾಜನ್, ಡಾ.ಎಂ.ಜಿ.ಈಶ್ವರಪ್ಪ, ಜೆ.ಲೋಕೇಶ್, ಶೋಭಾ ವೆಂಕಟೇಶ್, ಸಿ.ಕೆ.ಗುಂಡಣ್ಣ, ಬಿ.ವಿ.ರಾಜಾರಾಂ, ಗೌರಿದತ್ತು, ಕೆ.ವಿ.ನಾಗರಾಜಮೂರ್ತಿ, ದಾಕ್ಷಾಯಿಣಿ ಭಟ್ ಭಾಗವಹಿಸಲಿದ್ದಾರೆ. ಇದೇ ವೇಳೆ ಕಿಕ್ಕೇರಿ ಕೃಷ್ಣಮೂರ್ತಿ ಅವರು ಸುಗಮ ಸಂಗೀತ, ಸಾಯಿ ವೆಂಕಟೇಶ್ ಅವರ ಶಾಸ್ತ್ರೀಯ ನೃತ್ಯ, ಶಾಂತಕುಮಾರ್ ಅವರಿಂದ ರಂಗಗೀತೆಗಳು, ಟಿ.ಎನ್. ಶ್ರೀನಾಥ್ ಅವರಿಂದ ಧಾರವಾಹಿ ಸಂವಾದ, ಸವಿತಾ ಗಣೇಶ್ ಅವರಿಂದ ಜನಪದಗೀತೆ ಕಾರ್ಯಕ್ರಮ ನಡೆಸಿಕೊಡಲಿದ್ದಾರೆಂದರು.

ಸರಳವಾಗಿ ನಡೆದ ಕಳಸೋತ್ಸವ

ಹುಳಿಯಾರು: ಹುಳಿಯಾರಿನ ಗ್ರಾಮದೇವತೆ ಶ್ರೀ ಹುಳಿಯಾರಮ್ಮ ದೇವಿಯವರ 10 ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ಮುಂಜಾನೆ ಏರ್ಪಡಿಸಿದ್ದ ಕಳಸೋತ್ಸವವು ವೈಭವದಿಂದ ನೆರವೇರಿತು.

ಇಲ್ಲಿನ ಗ್ರಾಮದೇವತೆಗಳಾದ ಶ್ರೀಹುಳಿಯಾರಮ್ಮ, ಶ್ರೀ ದುರ್ಗಾಪರಮೇಶ್ವರಿ ಅಮ್ಮನವರು, ಶ್ರೀ ಕೆಂಚಮ್ಮ ದೇವರುಗಳ ಆಗಮನ ಹಾಗೂ ಭೇಟಿ ನಂತರ ಕಳಸೋತ್ಸವ ಆರಂಭವಾಯಿತು. ಹುಳಿಯಾರು ಕೆರೆ ಮೈದುಂಬಿದ್ದರಿಂದ ಕೆರೆಯಲ್ಲಿ ಸ್ಥಾಪಿಸಲಾಗುತ್ತಿದ್ದ ಕಲಶವನ್ನು ಈ ವರ್ಷ ಹುಳಿಯಾರಮ್ಮನವರ ಮೂಲಗುಡಿಯ ಬಳಿ ಸ್ಥಾಪಿಸಲಾಯಿತು.

ಉತ್ಸವದಲ್ಲಿ ಕೋಡಿಪಾಳ್ಯ, ಲಿಂಗಪ್ಪನಪಾಳ್ಯ, ಕಾಮಶೆಟ್ಟಿಪಾಳ್ಯ, ಹುಳಿಯಾರು, ಕೇಳವಾಪುರ ಹಾಗೂ ಸೋಮಜ್ಜನಪಾಳ್ಯ ಗ್ರಾಮಗಳ ಹೆಣ್ಣು ಮಕ್ಕಳು ಭಕ್ತಿ ಪೂರ್ವಕವಾಗಿ ಶ್ರೀ ಹುಳಿಯಾರಮ್ಮನವರ ಕಳಸವನ್ನು ತಲೆ ಮೇಲೆ ಹೊತ್ತು ನಡೆಮುಡಿಯೊಂದಿಗೆ ಮೂಲ ಸ್ಥಾನಕ್ಕೆ ಆಗಮಿಸಿದರು.

ಈ ಕಳಸೋತ್ಸವವು ಮಂಗಳವಾದ್ಯಗಳೊಂದಿಗೆ ಶ್ರೀ ಅಮ್ಮನವರ ಮೂಲ ಸ್ಥಾನದಿಂದ ಹೊರಟು ಅಲ್ಲಿಂದ ಶ್ರೀ ರಂಗನಾಥಸ್ವಾಮಿ ದೇವಸ್ಥಾನ ರಸ್ತೆ ಮೂಲಕ ಹುಳಿಯಾರಮ್ಮ ದೇವಸ್ಥಾನ ತಲುಪಿತು. ಈ ಕಳಸೋತ್ಸವ ನೋಡಲು ಜನಜಾತ್ರೆಯೇ ನೆರೆದಿತ್ತು. ಬೆಳಿಗ್ಗೆಯಿಂದಲೇ ಅನ್ನಸಂತರ್ಪಣೆ ಸಹ ನಡೆಸಲಾಯಿತು.

6ನೇ ತರಗತಿ ವಸತಿ ಶಾಲೆಗಳ ಪ್ರವೇಶಾತಿಗೆ ಅರ್ಜಿ ಆಹ್ವಾನ

ಬೆಳಗಾವಿ: 2023–2024 ನೇ ಸಾಲಿಗ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಬೆಳಗಾವಿ ಜಿಲ್ಲೆಯಲ್ಲಿ ಮೊರಜಿ ದೇಸಾಯಿ, ಕಿತ್ತೂರು ರಾಣಿ ಚೆನ್ನಮ್ಮ ಹಾಗೂ ಇತರೆ ವಸತಿ ಶಾಲೆಗಳ 6ನೇ ತರಗತಿಯ ದಾಖಲಾತಿಗಾಗಿ ಮಾರ್ಚ್ 12, 2023 ರಂದು ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 1 ವರೆಗೆ ಪರೀಕ್ಷೆ ನಡೆಯಲಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA) ವತಿಯಿಂದ ಪ್ರವೇಶ ಪರೀಕ್ಷೆ ಮತ್ತು ಆನ್‌ಲೈನ್ ಕೌನ್ಸಿಲಿಂಗ್ ನಡೆಸಲಾಗುವುದು. ಪ್ರಸ್ತುತ 5ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಪಾಲಕರು/ಪೋಷಕರು ತಮ್ಮ ಮಕ್ಕಳನ್ನು 6ನೇ ತರಗತಿಗೆ ವಸತಿ ಶಾಲೆಗಳಿಗೆ ದಾಖಲಿಸಲು ಜನವರಿ 5, 2023 ರಿಂದ ಜನವರಿ 22 ರವರೆಗೆ ಅವಶ್ಯಕ ದಾಖಲಾತಿಗಳೊಂದಿಗೆ ತಮ್ಮ ಹತ್ತಿರದ ವಸತಿ ಶಾಲೆಗಳ ಮೂಲಕ ಆನ್‌ಲೈನ್ ಅರ್ಜಿ ಸಲ್ಲಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ ಹುದ್ದೆಗಳ ನೇಮಕಾತಿ

ಬೆಳಗಾವಿ : ಬೆಳಗಾವಿ ಜಿಲ್ಲೆಯ ಖಾನಾಪೂರ ಮತ್ತು ರಾಯಬಾಗ ತಾಲೂಕಿನ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳಲ್ಲಿ ಖಾಲಿ ಇರುವ ಪುನರ್ವಸತಿ ಕಾರ್ಯಕರ್ತರ (ಪ್ಹಿ.ಆರ್.ಡಬ್ಲ್ಯೂ) ಹುದ್ದೆಗಳ ನೇಮಕಾತಿಗಾಗಿ ಆಯಾ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಅರ್ಹ ವಿಕಲಚೇತನ ಅಭ್ಯರ್ಥಿಗಳಿಂದ ಇಲಾಖೆಯ ಗ್ರಾಮೀಣ ಪುನರ್ವಸತಿ ಯೋಜನೆ ಅಡಿ ಮಾಸಿಕ 9000 ರೂಗಳ ಗೌರವಧನ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ವಿಕಲಚೇತನ ಅಭ್ಯರ್ಥಿಗಳು ಫೆಬ್ರವರಿ 17, 2023 ರ ಸಂಜೆ 5 ಗಂಟೆಗಳ ಒಳಗಾಗಿ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲೂಕು ಪಂಚಾಯತ ಕಾರ್ಯಾಲಯ ಖಾನಾಪೂರ ಮತ್ತು ರಾಯಬಾಗ ಇವರಿಗೆ ಅಗತ್ಯ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಲಾಗಿದೆ.

ಖಾನಾಪೂರ ತಾಲೂಕಿನ ನಾಗರಗಾಳಿ ಗ್ರಾಮ ಪಂಚಾಯಿತಿಯಲ್ಲಿ 1 ಹುದ್ದೆ ಖಾಲಿ ಇರುತ್ತದೆ. ರಾಯಬಾಗ ತಾಲೂಕಿನ ಬೆಕ್ಕೇರಿ(1), ಮೊರಬ(1) ಹಾಗೂ ಹುಬ್ಬರವಾಡಿ(1) ಗ್ರಾಮ ಪಂಚಾಯಿತಿಯಲ್ಲಿ ತಲಾ ಒಂದು ಹುದ್ದೆಗಳು ಖಾಲಿ ಇರುತ್ತವೆ.

ಷರತ್ತುಗಳು:

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ವಿಕಲಚೇತನರಾಗಿದ್ದು, ಶೇಕಡ 40 ರಷ್ಟು ವಿಕಲತೆ ಪ್ರಮಾಣ ಹೊಂದಿರತಕ್ಕದ್ದು, ಗ್ರಾಮ ಪಂಚಾಯತಿಗಳ ವ್ಯಾಪ್ತಿಗೊಳಪಟ್ಟಿರಬೇಕು. ಅರ್ಜಿದಾರರು ಕನಿಷ್ಠ ಎಸ್ಸೆಸ್ಸೆಲ್ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾಗಿದ್ದು, ಕಂಪ್ಯೂಟರ್ ಜ್ಞಾನ ಹೊಂದಿರಬೇಕು. ಮತ್ತು ಅರ್ಜಿ ಸಲ್ಲಿಕೆಯ ಕೊನೆಯ ದಿನಾಂಕ ಫೆಬ್ರುವರಿ 17, 2023 ಕ್ಕೆ ಕನಿಷ್ಠ 18 ವರ್ಷ ಹಾಗೂ ಗರಿಷ್ಠ 45 ವರ್ಷ ವಯೋಮಿತಿಯಲ್ಲಿರಬೇಕು.

ವಿಕಲಚೇತನ ಮಹಿಳಾ, ಪ. ಜಾತಿ ಮತ್ತು ಪ. ಪಂಗಡದ ಅಭ್ಯರ್ಥಿಗಳು ಹಾಗೂ ಇಲಾಖೆಯ ಯೋಜನೆಗಳ ಬಗ್ಗೆ ಜ್ಞಾನ ಹೊಂದಿರುವ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ್ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾಮಶೆಟ್ಟಿಪಾಳ್ಯ ಶಿವನಂಜಪ್ಪ ನಿಧನ

ಹುಳಿಯಾರು: ಹುಳಿಯಾರು ಸಮೀಪದ ಕಾಮಶೆಟ್ಟಿಪಾಳ್ಯದ ಶಿವನಂಜಪ್ಪ (81) ಅವರು ದೈವಾಧೀನರಾಗಿದ್ದಾರೆ.

ಶಿವನಂಜಪ್ಪ ಅವವು ಹುಳಿಯಾರಿನ ಶ್ರೀ ದುರ್ಗಾಪರಮೇಶ್ವರಿ ಮತ್ತು ಶ್ರೀ ಕೆಂಚಾಂಬ ದೇವಿ ದೇವಸ್ಥಾನದ ಮಾಜಿ ಗೌಡರಾಗಿದ್ದರು. ಹುಳಿಯಾರು ಟೌನ್ ಕೋ ಆಪರೇಟಿವ್ ಸೊಸೈಟಿಯ ಮಾಜಿ ಅಧ್ಯಕ್ಷರಾಗಿ ಹಾಗೂ ಹಾಲಿ ಸದಸ್ಯರಾಗಿ ಸಮಾಜ ಸೇವೆಯಲ್ಲಿ ನಿರಂತರವಾಗಿ ತೊಡಗಿ–ಕೊಂಡಿದ್ದರು.

ಮೃತರು ಮೂವರು ಪುತ್ರರು ಹಾಗೂ ಓರ್ವ ಪುತ್ರಿ ಸೇರಿದಂತೆ ಮೊಮ್ಮಕ್ಕಳು, ಅಪಾರ ಬಂಧುಗಳನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆ ಕಾಮಶೆಟ್ಟಿಪಾಳ್ಯದ ಅವರ ಜಮೀನಿನಲ್ಲಿ ನಡೆಯಿತು.

ಕಲಿಕಾ ಕೌಶಲ್ಯ ಮತ್ತು ವ

ಗುರು ಮಠಗಳು ಸಂಸ್ಕಾರ ಕಲಿಸುವ ಕೇಂದ್ರಗಳಾಗಿವೆ: ಶ್ರೀ ರಂಭಾಪುರಿ ಜಗದ್ಗುರುಗಳು

ಇಳಕಲ್ಲ :ಹೆಂಸ್ಕಾರದಿಂದ ಮಾನವ ಬದುಕಿಗೆ ಬೆಲೆ ನೆಲೆಯಿದೆ. ಮೌಲ್ಯಗಳ ಸಂರಕ್ಷಣೆ ಸಂಸ್ಕಾರದಿಂದ ದೊರಕಲು ಸಾಧ್ಯ. ವೀರಶೈವ ಧರ್ವದ ಗುರು ಮಠಗಳು ಸಂಸ್ಕಾರ ಕಲಿಸುವ ಪವಿತ್ರ ಕೇಂದ್ರಗಳಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಶ್ರೀಮದ್ರಂಭಾಪುರಿ ಶಾಖಾ ನಂದವಾಡಗಿ ಶ್ರೀ ಮಹಂತೇಶ್ವರ ಸಂಸ್ಥಾನ ಹಿರೇಮಠದ ಶ್ರೀ ಗುರು ಪಟ್ಟಾಧಿಕಾರ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಮನುಷ್ಯ ಬದುಕಿ ಬಾಳಲು ನೀರು, ಅನ್ನ ಮತ್ತು ಗಾಳಿ ಎಷ್ಟು ಮುಖ್ಯವೋ ಅಷ್ಟೇ ಆದರ್ಶ ವ್ಯಕ್ತಿಯಾಗಿ ಬಾಳಿ ಬದುಕಲು ಜೀವನದಲ್ಲಿ ಸಂಸ್ಕಾರಗಳು ಬಹಳ ಮುಖ್ಯ. ಮಲತ್ರಯಗಳನ್ನು ದೂರ ಮಾಡಿ ಶಿವಜ್ಞಾನವನ್ನು ಉಂಟು ಮಾಡುವುದೇ ಗುರುವಿನ ಪರಮ ಧರ್ಮವಾಗಿದೆ. ವೀರಶೈವ ಧರ್ಮದಲ್ಲಿ ಶ್ರೀ ಗುರುವಿಗೆ ಮೊದಲ ಸ್ಥಾನ ಕಲ್ಪಿಸಿದ್ದಾರೆ. ಶ್ರೀ ಗುರುವಿನ ಜ್ಞಾನ ಬೋಧಾಮೃತದಿಂದ ಬಾಳ ಬದುಕು ವಿಕಾಸಗೊಳ್ಳುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಮೌಲ್ಯಾಧಾರಿತ ಬದುಕಿಗೆ ಅಮೂಲ್ಯವಾದ ನೀತಿ ಸಂಹಿತೆ ಬೋಧಿಸಿದ್ದಾರೆ. ಧರ್ಮ ಬೀಜವ ಬಿತ್ತಿ ಕರ್ಮ ಕತ್ತಲೆ ಕಳೆದು ಬದುಕು ಬಂಗಾರಗೊಳಿಸಿದ ಶ್ರೇಯಸ್ಸು ಶ್ರೀ ಗುರುವಿಗೆ ಸಲ್ಲುತ್ತದೆ. ನಂದವಾಡಗಿ ಶ್ರೀ ಮಹಂತೇಶ್ವರ ಸಂಸ್ಥಾನ ಹಿರೇಮಠ ಶ್ರೀ ರಂಭಾಪುರಿ ಪೀಠದ ಶಾಖಾ ಮಠವಾಗಿದ್ದು ಮಹಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಶ್ರೀ ಮಠದ ಅಭಿವೃದ್ಧಿ ಮತ್ತು ಭಕ್ತ ಸಮುದಾಯಕ್ಕೆ ಮಾರ್ಗದರ್ಶನ ನೀಡಿದ್ದನ್ನು ಮರೆಯಲಾಗದು. ಪುತ್ರವರ್ಗ ಪರಂಪರೆಯ ಶ್ರೀ ಮಠಕ್ಕೆ ಇಂದು ಚನ್ನಬಸವ ಶಿವಾಚಾರ್ಯ ಸ್ವಾಮಿಗಳವರಿಗೆ ಸಂಸ್ಕಾರ ನೀಡಿ ಶ್ರೀ ಗುರು ಪಟ್ಟಾಧಿಕಾರ ನೆರವೇರಿಸಿದ್ದು ಸಂತೋಷದ ಸಂಗತಿ. ನೂತನ ಶ್ರೀಗಳವರಿಗೆ ಪಂಚ ಮುದ್ರಾ ಸಮೇತ ರೇಶ್ಮೆ ಮಡಿ ಫಲ ಪುಷ್ಪದೊಂದಿಗೆ ದಂಡ ಕಮಂಡಲವನ್ನು ಶ್ರೀ ರಂಭಾಪುರಿ ಜಗದ್ಗುರುಗಳನು ಅನುಗ್ರಹಿಸಿ ಆಶೀರ್ವದಿಸಿ ಶ್ರೀ ಮಠದ ಧಾರ್ಮಿಕ ಮತ್ತು ಸಾಮಾಜಿಕ ಸೇವಾ ಕಾರ್ಯಗಳನ್ನು ಮುಂದುವರಿಸಿಕೊಂಡು ಹೋಗುವ ಜವಾಬ್ದಾರಿ ನೂತನ ಶ್ರೀಗಳ ಮೇಲಿದೆ ಎಂದರು.

ನೇತೃತ್ವ ವಹಿಸಿದ ಮಹಾಂತಲಿಂಗ ಶಿವಾಚಾರ್ಯರು ಮಾತನಾಡಿ ಶ್ರೀ ಮಠದ ಚಾರಿತ್ರಿಕ ಇತಿಹಾಸದಲ್ಲಿ ಇಂದು ಅವಿಸ್ಮರಣೀಯ ದಿನ. ಶ್ರೀ ರಂಭಾಪುರಿ ಜಗದ್ಗುರುಗಳ ದಿವ್ಯ ಸಾನ್ನಿಧ್ಯದಲ್ಲಿ ನೂತನ ಶ್ರೀಗಳವರ ಪಟ್ಟಾಧಿಕಾರ ನೆರವೇರಿದ್ದು ಈ ಭಾಗದ ಸಕಲ ಸದ್ಭಕ್ತರಿಗೆ ಸಂತೋಷವನ್ನು ಉಂಟು ಮಾಡಿದೆ ಎಂದರು. ಮಾನ್ವಿ ಕಲ್ಮಠದ ಶಿವಮೂರ್ತಿ ಶಿವಾಚಾರ್ಯರು, ಸಿಂದಗಿ ಸಾರಂಗಮಠದ ಪ್ರಭು ಸಾರಂಗದೇವ ಶಿವಾಚಾರ್ಯರು, ಹುಕ್ಕೇರಿ ಹಿರೇಮಠದ ಚಂದ್ರಶೇಖರ ಶಿವಾಚಾರ್ಯರು, ಚಳಗೇರಿ ಹಿರೇಮಠದ ವೀರಸಂಗಮೇಶ್ವರ ಶಿವಾಚಾರ್ಯರು, ಮಸ್ಕಿ ಹಿರೇಮಠದ ವರರುದ್ರಮುನಿ ಶಿವಾಚಾರ್ಯರು, ಕನ್ನೂರು ಗುರುಮಠದ ಸೋಮನಾಥ ಶಿವಾಚಾರ್ಯರು, ಕುಷ್ಟಗಿ ಕರಿಬಸವ ಶಿವಾಚಾರ್ಯರು, ಕೊಣ್ಣೂರು ಡಾ.ವಿಶ್ವಪ್ರಭು ಶಿವಾಚಾರ್ಯರು, ನಿಡಗುಂದಿ ರುದ್ರಮುನಿ ಶಿವಾಚಾರ್ಯರು, ಸಂತೇಕೆಲ್ಲೂರು ಗುರುಬಸವ ಶಿವಾಚಾರ್ಯರು, ಸಂತೇಕೆಲ್ಲೂರು ಮಹಾಂತ ಶಿವಾಚಾರ್ಯರು, ದೇವರಭೂಪುರ ಗಜದಂಡ ಶಿವಾಚಾರ್ಯರು, ಹೀರೂರು ಜಯಸಿದ್ಧೇಶ್ವರ ಶಿವಾಚಾರ್ಯರು ಮೊದಲ್ಗೊಂಡು 25ಕ್ಕೂ ಹೆಚ್ಚು ಮಠಾಧೀಶರು ಪಟ್ಟಾಧಿಕಾರ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಕ್ಷೇತ್ರದ ಶಾಸಕ ದೊಡ್ಡನಗೌಡ ಜಿ. ಪಾಟೀಲ ಧರ್ಮ ಸಮಾರಂಭವನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿದರು.

ನೂತನ ಪಟ್ಟಾಧ್ಯಕ್ಷರಾದ ಚನ್ನಬಸವ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಶ್ರೀ ಮಠದ ಪವಿತ್ರ ಪರಂಪರೆ–ಗುರು ಧರ್ಮದ ಆದರ್ಶ ಮೌಲ್ಯ ಉಳಿಸಿ ಬೆಳೆಸುವ ಸಂಕಲ್ಪ ನನ್ನದಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳ ಉದಾತ್ತ ಮಾರ್ಗದರ್ಶನದಲ್ಲಿ ಭಕ್ತ ಸಮುದಾಯಕ್ಕೆ ಸತ್ಪಥ ತೋರಿ ಮುನ್ನಡೆಯುತ್ತೇವೆ ಎಂದರು.

ಸಮಾರಂಭಕ್ಕೂ ಮುನ್ನ ಬಾಳೆಹೊನ್ನೂರು ಶ್ರೀ ರಂಭಾಪುರಿ ಜಗದ್ಗುರುಗಳವರ ಅಡ್ಡಪಲ್ಲಕ್ಕಿ ಮಹೋತ್ಸವ ಭಕ್ತ ಸಮೂಹದ ಮಧ್ಯೆ ಸಂಭ್ರಮದಿಂದ ಜರುಗಿತು.

ಸಕಲ ವಾದ್ಯ ವೈಭವ ಕಳಸ ಕನ್ನಡಿಯೊಂದಿಗೆ ಸಹಸ್ರಾರು ಜನ ಭಕ್ತರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳವರ ಅಶೀರ್ವಾದ ಪಡೆದರು. ಆಗಮಿಸಿದ ಸಕಲ ಸದ್ಭಕ್ತರಿಗೆ ನಿರಂತರ ಅನ್ನ ದಾಸೋಹ ವ್ಯವಸ್ಥಿತವಾಗಿ ಜರುಗಿತು.

ಪ್ರತಿಷ್ಠಿತ ಬೆಸ್ಟ್ ಕಾಲೇಜಿನಲ್ಲಿ ಪ್ರಶಸ್ತಿ ಪ್ರಧಾನ ಸಮಾರಂಭ

ಬಳ್ಳಾರಿ :ಬಳ್ಳಾರಿ ನಗರದ ಪ್ರತಿಷ್ಠಿತ ಬೆಸ್ಟ್ ಕಾಲೇಜಿನಲ್ಲಿ ನಡೆದ ತಾಲೂಕು ಮಟ್ಟ, ಜಿಲ್ಲಾ ಮಟ್ಟದಲ್ಲಿ ನಡೆದ ಕ್ರೀಡೆ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಭಾಗವಹಿಸಿ ವೀರಾಗ್ರಣಿ ಪ್ರಶಸ್ತಿ ಪಡೆಯಲು ಕಾರಣರಾದ ಮತ್ತು ವಿಭಾಗೀಯ ಮಟ್ಟ, ರಾಜ್ಯಮಟ್ಟದಲ್ಲಿ ಭಾಗವಹಿಸಿ ಪ್ರಶಸ್ತಿ ಪಡೆದುಕೊಂಡಿರುವ, ಮೂಡುಬಿದಿರೆಯಲ್ಲಿ ನಡೆದ ಅಂತರಾಷ್ಟ್ರೀಯ ಜಾಂಬೂರಿಯಲ್ಲಿ ಭಾಗವಹಿಸಿದ ಬೆಸ್ಟ್ ಕಾಲೇಜಿನ ಸ್ಕೌಟ್ಸ್ ಅಂಡ್ ಗೈಡ್ಸ್‌ನ ರೋವರ್ಸ್ ಮತ್ತು ರೇಂಜರ್ಸ್ ವಿದ್ಯಾರ್ಥಿಗಳನ್ನು ಅಭಿನಂದಿಸಿ ಅವರಿಗೆ ಪ್ರಶಸ್ತಿ ಮತ್ತು ಪ್ರಮಾಣ ಪತ್ರಗಳನ್ನು ವಿತರಣೆ ಮಾಡಲಾಯಿತು.

ರಾಷ್ಟ್ರಮಟ್ಟದ ಹಾಕಿ ತಂಡಕ್ಕೆ ಆಯ್ಕೆಯಾದ ಪ್ರದೀಪ್ ನಾಯಕ್ ಈ ವಿದ್ಯಾರ್ಥಿಯನ್ನು ಅಭಿನಂದಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಕೆ.ವೆಂಕಟೇಶ್ವರರಾವ್ ವಿದ್ಯಾರ್ಥಿಗಳು ಕ್ರೀಡೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಿ ದೈಹಿಕ ಮತ್ತು ಮಾನಸಿಕ ಸ್ಥಿರತೆಯನ್ನು ಕಾಪಾಡಿಕೊಂಡು ಉನ್ನತ ವಿದ್ಯಾಭ್ಯಾಸದ ಗುರಿಯನ್ನು ಹೊಂದಬೇಕೆಂದು ಕಿವಿಮಾತು ಹೇಳಿದರು.

ಉಪಪ್ರಾಂಶುಪಾಲರಾದ ಜಿ.ಶ್ರೀನಿವಾಸ ರೆಡ್ಡಿಯವರು ಮಾತನಾಡಿ ನಮ್ಮ ಆಹಾರವೇ ನಮಗೆ ಔಷಧವಾಗಬೇಕು ವಿನಹ ಔಷಧವೇ ಆಹಾರವಾಗಬಾರದು, ಮುಂಬರುವ ಪರೀಕ್ಷೆಗಳ ಸಿದ್ಧತೆಯನ್ನು ಮಾಡಿಕೊಂಡು ಉತ್ತಮ ಸ್ವಾಸ್ಥ್ಯವನ್ನು ಕಾಪಾಡಿಕೊಂಡು ಸರ್ವಾಂಗೀಣ ಬೆಳವಣಿಗೆಯತ್ತ ಸಾಗಬೇಕೆಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಎಲ್ಲಾ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಶೋಭೆ ತಂದುಕೊಟ್ಟರು.

ನಿರಂತರ ವಿದ್ಯುತ್ ಟ್ರಾನ್ಸ್‌ಫಾರ್ಮ ಉದ್ಘಾಟನೆ

ಬಳ್ಳಾರಿ : ಬಳ್ಳಾರಿ ಜಿಲ್ಲೆಯ ತೆಕ್ಕಲಕೋಟೆ ವಲಯದ ವಿವಿಧ ಹಳ್ಳಿಗಳಿಗೆ ಪ್ರತ್ಯೇಕ ವಿದ್ಯುತ್ ಲೈನ್ ವ್ಯವಸ್ಥೆ ಮಾಡಿದ್ದು ಇನ್ನು ಮುಂದೆ ಹಳೇಕೋಟೆ, ತೆಕ್ಕಲಕೋಟೆ ಗ್ರಾಮಗಳಿಗೆ ನಿರಂತರ ವಿದ್ಯುತ್ ದೊರೆಯಲಿದೆ ಎಂದು ಸಿರುಗುಪ್ಪ ಶಾಸಕರಾದ ಎಂ.ಎಸ್ ಸೋಮಲಿಂಗಪ್ಪ ಅವರು ತಿಳಿಸಿದರು. ತಾಲ್ಲೂಕಿನ ತೆಕ್ಕಲಕೋಟೆಯ ಜೆಸ್ಕಾಂ ಕಛೇರಿಯಲ್ಲಿ ಗುರುವಾರ ನೂತನ ಟ್ರಾನ್ಸಫಾರ್ಮರನ್ನು ಅವರು ಉದ್ಘಾಟಿಸಿದರು.

ಈ ಹಿಂದೆ ತೆಕ್ಕಲಕೋಟೆ ಜೆಸ್ಕಾಂ ವ್ಯಾಪ್ತಿಯಲ್ಲಿನ ಹಳ್ಳಿಗಳಿಗೆ ಮತ್ತು ತೆಕ್ಕಲಕೋಟೆಯಲ್ಲಿ ಬೆಳಿಗ್ಗೆ, ಸಾಯಂಕಾಲ ವಿದ್ಯುತ್ ಅಡಚಣೆ ಉಂಟಾಗುತ್ತಿತ್ತು.

ಈ ವ್ಯವಸ್ಥೆಯಿಂದಾಗಿ ರೈತರಿಗೆ, ವ್ಯಾಪಾರಸ್ಥರಿಗೆ ಮತ್ತು ಸಾರ್ವಜನಿಕರಿಗೆ ವಿದ್ಯುತ್ ಸಮಸ್ಯೆ ಉಂಟಾಗುವುದಿಲ್ಲವೆಂದು 24 ತಾಸು ವಿದ್ಯುತ್ ದೊರೆಯುವದಾಗಿ ಎಇಇ ನವೀನ್ ಕುಮಾರ್ ತಿಳಿಸಿದರು. ಶಾಸಕರ ಪುತ್ರ ಸಿದ್ದಪ್ಪ, ಪ.ಪಂ.ಅಧ್ಯಕ್ಷರಾದ ತಿಮ್ಮಪ್ಪ ,ಉಪಾಧ್ಯಕ್ಷರಾದ ದ್ಯಾವಣ್ಣ ,ಕೋಮಾರಪ್ಪ, ಫರಸಣ್ಣ, ಸಿದ್ದನಗೌಡ, ಲಕ್ಷ್ಮೀನಾರಾಯಣ, ಕೃಷ್ಣ, ಶಾಬಾದಿ ವೀರೇಶಪ್ಪ, ವಿಜಯ ಚಿರಂಜೀವಿ ಮತ್ತು ಸಿಬ್ಬಂದಿಯವರು ಇದ್ದರು.

ದಕ್ಷಿಣಾಮೂರ್ತಿ ಮತ್ತು ವಿ.ಕೃಷ್ಣಮೂರ್ತಿಯವರಿಂದ ಶಿಕ್ಷಣದ ಹೆಸರಲ್ಲಿ ಸರಕಾರಕ್ಕೆ 30 ಕೋಟಿ ವಂಚನೆ: ಕ್ರಮಕ್ಕೆ ಆಗ್ರಹಿಸಿದ ಚನ್ನಬಸವಸ್ವಾಮಿ

ಬಳ್ಳಾರಿ : ನಿಯಮ ಬಾಹಿರವಾಗಿ ಪರಿಶಿಷ್ಟಜಾತಿ ಪರಿಶಿಷ್ಟ ಪಂಗಡಗಡ ಆಡಳಿತ ಮಂಡಳಿ ಶ್ರೀ ಉಜ್ಜಯಿನಿ ಜಗದ್ಗುರು ಸಿದ್ಧೇಶ್ವರ ವಿದ್ಯಾ ವರ್ಧಕ ಸಂಘ, ಬಂಡಿಮೋಟು ಬಳ್ಳಾರಿಯ ವ್ಯವಹಾರಾಧಿಕಾರಿ ಎಸ್.ಯಂ. ದಕ್ಷಿಣಾಮೂರ್ತಿಯವರು ಈಗಿನ ಶರಭೇಶ್ವರ ವಿದ್ಯಾ ಪೀಠದ ಅಧ್ಯಕ್ಷ ಇವರು ಆರ್.ಹೆಚ್.ಯಂ. ಚನ್ನಬಸವಸ್ವಾಮಿ ಶಿಕ್ಷಕರು ದಿನಾಂಕ 21.08.1989 ರಂದು ಸೇವೆಯಿಂದ ವಜಾ ಮಾಡಿರುತ್ತಾರೆ.

ನಾನು ನ್ಯಾಯಾಲಯದ ಮೊರೆ ಹೋಗಿರುತ್ತೇನೆ. 1994 ರಲ್ಲಿ ಅಕ್ರಮವಾಗಿ ಶರಭೇಶ್ವರ ವಿದ್ಯಾ ಪೀಠಕ್ಕೆ ಹಸ್ತಾಂತರಿಸಿ ವಿ.ಕೃಷ್ಣಮೂರ್ತಿಯವರನ್ನು ನ್ಯಾಯಾಲಯಕ್ಕೆ ವ್ಯವಹಾರಾಧಿಕಾರಿ, ಕಾರ್ಯದರ್ಶಿ,ಉಪಾಧ್ಯಕ್ಷ ಎಂಬ ನಾಮಾಂಕಿತದಿಂದ ಸಹಿ ಮಾಡುತ್ತ ನ್ಯಾಯಾಲಗಳಿಗೆ ವಂಚಿಸಿ ನನಗೆ ನ್ಯಾಯಾಲಯದಮೂಲಕ ವೇತನದ ತೊಂದರೆ ಅನುಭವಿಸುವಂತೆ ಮಾಡಿದ್ದಾರೆ. 1998 ರಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ ನನ್ನ ಪರ ನ್ಯಾಯ ಸಿಕ್ಕಿರುತ್ತದೆ. ನ್ಯಾಯಾಲಯದ ಆದೇಶದ ಪ್ರತಿಯನ್ನು ಈಗಾಗಲೆ ತಮ್ಮ ಅವಗಹನೆಗೆ ತಂದಿರುತ್ತೇನೆ.

ಆದರೆ ದಕ್ಷಿಣಾಮೂರ್ತಿಯವರು ನ್ಯಾಯಾಲಯದಲ್ಲಿ ಆರ್.ಹೆಚ್.ಯಂ. ಚನ್ನಬಸವಸ್ವಾಮಿಯವರು 21.08.1989 ರಂದು ವಜಾ ಮಾಡಿದ ಮೇಲೆ ಎಸ್. ಯಂ. ದಕ್ಷಿಣಾಮೂರ್ತಿಯವರು ಶಿಕ್ಷಕಿ ಕೆ.ಗೀತಾ ರವರಿಗೆ ದಿನಾಂಕ 05.08.1989 ರಂದು ನೀಡಿದ ನೇಮಕಾತಿ ಆದೇಶದಂತೆ ಶ್ರೀಮತಿ ಕೆ.ಗೀತ ತಂದೆ ಪುರುಷೋತ್ತಮ ರಡ್ಡಿ ಎನ್ನುವವರು ದಿನಾಂಕ 05.09.1989 ರಂದು ಮುಖ್ಯೋಪಾಧ್ಯಾಯರ ಸಮ್ಮುಖದಲ್ಲಿ ಸೇವೆಗೆ ಹಾಜರಾಗಿದ್ದಾರೆ ಎಂದು ತೋರಿಸಿ ಈ ನೇಮಕಾತಿಯು ಶಿಕ್ಷಣ ಇಲಾಖೆಯಿಂದ ಅನುದಾದ ಸಹಿತ ಅನುಮೋದನೆಯಾಗಿದೆ ಎಂದು ನ್ಯಾಯಾಲಯದಲ್ಲಿ ಹಾಜರು ಪಡಿಸಿದ್ದಾರೆ. ಅಲ್ಲದೆ ಸದರಿ ಶಿಕ್ಷಕಿ ಕೆ.ಗೀತಾ ರವರು ಶ್ರೀ ಉ.ಜ.ಸಿ. ಬಾಲಕಿಯರ ಪ್ರೌಢಶಾಲೆ ಉಜ್ಜಯಿನಿ, ಕೂಡ್ಲಿಗಿ(ತಾ) ನಿಂದ 1991 ರಲ್ಲಿ ಜಗಳೂರುನ ಸದ್ಧರ್ಮ ಸಿಂಹಾಸನ ಜ್ಞಾನಗುರು ವಿದ್ಯಾ ಪೀಠದಡಿಯಲ್ಲಿನ ಶ್ರೀ ಉ.ಜ.ಸಿ. ಪ್ರೌಢಶಾಲೆಗೆ ವರ್ಗಾವಣೆ ಯಾಗಿದ್ದಾರೆ.

ಆದರೆ ಅದೇ ಸಮಯದಲ್ಲಿ ಬಳ್ಳಾರಿಯ ಶ್ರೀ ಉ.ಜ.ಸಿ. ಪ್ರೌಢಶಾಲೆ, ಬಂಡಿಮೋಟು,ನಲ್ಲಿ ಎಸ್. ಯಂ. ದಕ್ಷಿಣಾಮೂರ್ತಿಯವರ ಹೆಂಡತಿಯ ಅಕ್ಕ (ತಮ್ಮ ದಿ॥ ನಟರಾಜರವರ ಹೆಂಡತಿ) ಯವರ ಸಹಕಾರದಿಂದ ದಿನಾಂಕ 09.07.1990 ರಿಂದ 31.12.1992 ರ ವರೆಗೆ ಅಕ್ರಮವಾಗಿ 29 ತಿಂಗಳುಗಳ ವೇತನವನ್ನು ಒಂದೇ ಸಮಯದಲ್ಲಿ ರೂ 69000/– ಗಳನ್ನು ಮಂಜೂರು ಮಾಡಿ ಮುಖ್ಯೋಪಾಧ್ಯಾಯರ ಸ್ವಂತ ಖಾತೆಗೆ ಜಮ ಆಗಿರುತ್ತದೆ.

ಸದರಿ ಶಾಲೆಯಲ್ಲಿ ಸೇವೆ ಸಲ್ಲಿಸದ ಬಗ್ಗೆ ಜನವರಿ 93 ರ ವರೆಗೆ ಒಂದು ದಿನವು ಕೆಲಸ ಮಾಡಿದ ಬಗ್ಗೆ ದಾಖಲೆಗಳು ಇರುವುದಿಲ್ಲ. ಆದರೆ ಈ ರೀತಿ ಎಸ್.ದಕ್ಷಿಣಾಮೂರ್ತಿಯವರು ಶಿಕ್ಷಣ ಇಲಾಖೆಗೆ ವಂಚಿಸಿ ಶಿಕ್ಷಕ ಆರ್.ಹೆಚ್. ಯಂ. ಚನ್ನಬಸವಸ್ವಾಮಿ ತಂದೆ ಆರ್.ಯಂ. ಕರಿಬಸಯ್ಯನಾದ ನನಗೆ ನ್ಯಾಯಾಲಯಕ್ಕೆ ವಂಚಿಸಿ 33 ವರ್ಷಗಳ ಕಾಲ ವೇತನದ ತೊಂದರೆ ಉಂಟು ಮಾಡಿದ ಬಗ್ಗೆ ತಮ್ಮ ಗಮನಕ್ಕೆ ಈಗಾಗಲೆ ದಾಖಲೆಗಳ ಸಹಿತ ಮನವಿಗಳನ್ನು ಸಲ್ಲಿಸಲಾಗಿದೆ.

ಸೌಲಭ್ಯಗಳ ಕುರಿತು ಚರ್ಚೆ

ಬೆಳಗಾವಿ: ಬೆಳಗಾವಿ ಉತ್ತರ ಮತಕ್ಷೇತ್ರದಶಾಸಕ ಅನಿಲ ಬೆನಕೆ ರವರು ಬೆಂಗಳೂರಿನಲ್ಲಿ ಇಂದು ಕರ್ನಾಟಕ ಮರಾಠ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ಪ್ರಕಾಶಆರ್. ಪಾಗೋಜಿ ಅವರನ್ನುಭೇಟಿ ಮಾಡಿಮರಾಠ ಅಭಿವೃದ್ಧಿ ನಿಗಮದವತಿಯಿಂದ ಮರಾಠ ಸಮುದಾಯದ ನಾಗರಿಕರಿಗೆ ದೋರಕುವ ಸೌಲಭ್ಯಗಳ ಕುರಿತುಚರ್ಚೆ ನಡೆಸಿದರು.

ನಂತರದಲ್ಲಿ ಬೆಳಗಾವಿ ಉತ್ತರ ಮತಕ್ಷೇತ್ರಕ್ಕೆ ಮರಾಠ ಅಭಿವೃದ್ಧಿ ನಿಗಮದಲ್ಲಿ ಹೆಚ್ಚುವರಿಯಾಗಿ ಗುರಿಗಳನ್ನು ನೀಡಿ ಸಮುದಾಯದಜನರಿಗೆ ಅನುಕೂಲ ಮಾಡಿಕೊಡುವಂತೆ ಮನವಿಯನ್ನು ಸಲ್ಲಿಸಿದರು.

2023–24ರ ಕೇಂದ್ರ ಬಜೆಟ್: ಅರ್ಥಹೀನ ಪದಪುಂಜಗಳ ಮೂಲಕ ವಾಸ್ತವ ಮುಚ್ಚಿಹಾಕುವ ಸುಳ್ಳಿನ ಕಂತೆ: ಎಸ್‌ಯೂಸಿಐ

ಬಳ್ಳಾರಿ: ನಿರೀಕ್ಷೆಯಂತೆ 2023ರ ಕೇಂದ್ರ ಮುಂಗಡ ಪತ್ರವು ದೇಶದಲ್ಲಿರುವ ತೀವ್ರ ಆರ್ಥಿಕ ಬಿಕ್ಕಟ್ಟಿನ ಕುರಿತ ಅಣಕು ದಾಖಲೆಯಂತಿದ್ದು, ಇದರ ಹೊರೆಯನ್ನು ಹೊತ್ತು ಮಿಲಿಯಾಂತರ ದುಡಿಯುವ ಜನರ ದಿವಾಳಿಯಾಗುತ್ತಿದ್ದಾರೆ. ಕೆಲವು 'ಸದ್ಭಾವನೆ'ಯ ಹಂಚಿಕೆಗಳಲ್ಲಿ ಅತ್ಯಲ್ಪ ಹೆಚ್ಚಳ ಅಥವಾ ವೈಯಕ್ತಿಕ ತೆರಿಗೆಗಳಲ್ಲಿ ಸಾಂಕೇತಿಕ ಕೊಡುಗೆಗಳು ಅಥವಾ 80 ಕೋಟಿ ಜನರಿಗೆ ಇನ್ನೂ ಒಂದು ವರ್ಷ ಉಚಿತ ಪಡಿತರವನ್ನು ಮುಂದುವರಿಸುವ ಕುರಿತು ಕೊಚ್ಚಿಕೊಳ್ಳುವುದು (ಹೆಚ್ಚಿನ ಜನರು ಬಡವರು ಎಂಬುದನ್ನು ಇದು ದೃಢೀಕರಿಸುತ್ತದೆ), ವಂಚನೆಗಳಾಗಿವೆ.

ಏಕೆಂದರೆ ಕಳೆದ ನಾಲ್ಕು ವರ್ಷಗಳಲ್ಲಿ 30% ರಷ್ಟು ಏರಿಕೆಯಾದ ಹಣದುಬ್ಬರಕ್ಕೆ ಹೋಲಿಸಿದರೆ ಈ ಪರಿಹಾರ ತುಂಬ ಕಡಿಮೆಯಿದೆ ಮತ್ತು ಹೆಚ್ಚಿನ ಸಂಕಟವನ್ನಷ್ಟೇ ನೀಡಲಾಗಿದೆ, ಅಲ್ಲದೆ ಇಂತಹ ಕೊಡುಗೆಗಳನ್ನು ಇತ್ತೀಚೆಗಷ್ಟೇ ಪ್ರಧಾನಿ ಮೋದಿಯವರು ಚುನಾವಣಾ ಪೂರ್ವ 'ಮಿಠಾಯಿ' ಎಂದು ಅಪಹಾಸ್ಯ ಮಾಡಿದ್ದರು. ಹೂಡಿಕೆಯನ್ನು ಹೆಚ್ಚಿಸುವ ಮತ್ತು ಮೂಲಸೌಕರ್ಯವನ್ನು ಹೆಚ್ಚಿಸುವ ಹೆಸರಿನಲ್ಲಿ ಏಕಸ್ವಾಮ್ಯ ಬಂಡವಾಳಶಾಹಿಗಳಿಗೆ ಹೆಚ್ಚಿನ ಪ್ರಯೋಜನಗಳನ್ನು ನೀಡುವುದನ್ನು ಮುಂದುವರಿಸುವಾಗ ಬಿಜೆಪಿಯ ಹಣಕಾಸು ಸಚಿವರ ಸಂಪೂರ್ಣ ಗಮನವು ವಾಡಿಕೆಯಂತೆ "ಮಾಡಲಾಗುವುದು", "ಸ್ಥಾಪಿಸಲಾಗುವುದು" ಮತ್ತು "ಸಂಭವಿಸುವ ಸಾಧ್ಯತೆಯಿದೆ" ಮುಂತಾದ ನುಡಿಗಟ್ಟುಗಳ ಮೇಲೆ ಮತ್ತು ಸರ್ಕಾರಿ ಯೋಜನೆಗಳಿಗೆ ಹೊಸದಾಗಿ–ವಿಚಿತ್ರ ಹಿಂದಿ ನಾಮಕರಣಗಳ ಮೇಲೆ ಕೇಂದ್ರೀಕೃತವಾಗಿತ್ತು. ಚುನಾವಣೆಗೆ ಮುನ್ನ ಪ್ರಧಾನಿ ನೀಡಿದ್ದ ದೊಡ್ಡ ಭರವಸೆಗಳ ಭರಾಟೆಯ ಬಗ್ಗೆ ಯಾವುದೇ ಉಲ್ಲೇಖವನ್ನು ಎಚ್ಚರಿಕೆಯಿಂದ ತಪ್ಪಿಸಲಾಗಿದೆ. ಯಾವುದೇ ವಿಶ್ವಾಸಾರ್ಹ ಬೆಂಬಲ ಪುರಾವೆಗಳಿಲ್ಲದೆ ಜಾಗತಿಕ ಆರ್ಥಿಕ ಪ್ರತಿಕೂಲತೆಯನ್ನು ತಡೆದುಕೊಳ್ಳಲು ದೇಶದ ಆರ್ಥಿಕತೆಯ 'ಸಾಮರ್ಥ್ಯದ' ಮೇಲೆ ಒತ್ತು ನೀಡಲಾಗಿದೆ.

ವಿತ್ತ ಸಚಿವರು ಡಿಜಿಟಲ್ ವಹಿವಾಟಿನಲ್ಲಿ 66% ಹೆಚ್ಚಳವನ್ನು ಹೇಳಿಕೊಂಡರೆ, ಇತ್ತೀಚೆಗೆ ಪ್ರಕಟವಾದ ವರದಿಗಳು ನೋಟು ಅಮಾನ್ಯೀಕರಣದ ಪೂರ್ವ ಅವಧಿಗೆ ಹೋಲಿಸಿದರೆ ನಗದು ವಹಿವಾಟು 72% ರಷ್ಟು ಹೆಚ್ಚಾಗಿದೆ ಎಂದು ತೋರಿಸುತ್ತದೆ. ಹಣದ

ನಶಿಸುತ್ತಿರುವ ವಿಶಿಷ್ಟ ಕಲೆ: ತರಬೇತಿ ನೀಡಲು ಆಸಕ್ತರಿಂದ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಜಿಲ್ಲೆಯಲ್ಲಿ ನಶಿಸಿ ಹೋಗುತ್ತಿರುವ ತಳಸಮುದಾಯಗಳ ವಿಶಿಷ್ಟ ಕಲೆಗಳನ್ನು ಮುನ್ನೆಲೆಗೆ ತರುವ ತರಬೇತಿ ನೀಡಲು ಆಸಕ್ತ ಗುರುಗಳು ಫೆ.5, 2023 ರೊಳಗೆ ತಮ್ಮ ಕಿರು ಪರಿಚಯ ಮತ್ತು ಸಾಧನೆಗೆ ಸಂಬಂಧಿಸಿದ ದಾಖಲಾತಿಗಳೊಂದಿಗೆ "ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಳಗಾವಿ–590016" ಇವರಿಗೆ ಅರ್ಜಿ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಉದ್ಯೋಗಿನಿ ಯೋಜನೆಯಡಿ ಅರ್ಜಿ ಆಹ್ವಾನ

ಬೆಳಗಾವಿ: 2022–23 ನೇ ಸಾಲಿನ ಬೆಳಗಾವಿ ಜಿಲ್ಲೆ ಮಹಿಳಾ ಅಭಿವೃದ್ಧಿ ನಿಗಮದಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಉಪ ಯೋಜನೆಯಡಿ ಬಳಕೆಯಾಗದ ಅನುದಾನದಡಿ ಉದ್ಯೋಗಿನಿ ಯೋಜನೆಯಡಿ ಪರಿಶಿಷ್ಟ ಪಂಗಡದ ಗುರಿ 6 ಇದ್ದು ಫಲಾನುಭವಿಗಳ ಆಯ್ಕೆ ಸಂಬಂಧವಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪರಿಶಿಷ್ಟ ಪಂಗಡದ ಮಾಜಿ ದೇವದಾಸಿ, ಹಾಗೂ ಅವರ ಮಗಳು, ದಮನಿತ ಮಹಿಳೆಯರಿಗೆ ಆದ್ಯತೆ ನೀಡಲಾಗಿದೆ. ಸ್ವಂತ ಉದ್ಯೋಗ ಕೈಗೊಳ್ಳಬಯಸುವ ಆಸಕ್ತ ಮಹಿಳೆಯರು ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಿಂದ ಅರ್ಜಿಗಳನ್ನು ಪಡೆದು ಅಗತ್ಯ ದಾಖಲೆಗಳನ್ನು ಲಗತ್ತಿಸಿ ಭರ್ತಿ ಮಾಡಿದ ಅರ್ಜಿಗಳನ್ನು ಫೆಬ್ರುವರಿ 20. 2023. ರೊಳಗಾಗಿ ಸಂಬಂಧಿಸಿದ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಗೆ ಸಾಯಂಕಾಲ 5.30 ರೊಳಗಾಗಿ ಅರ್ಜಿಗಳನು ಸಲ್ಲಿಸಬೆಕು.

ಸಾಲ ಪಡೆಯಲು ಅರ್ಹತೆಗಳು:

ಅರ್ಜಿದಾರಳು ಕರ್ನಾಟಕ ರಾಜ್ಯದ ಖಾಯಂ ನಿವಾಸಿಗಳಾಗಿರಬೇಕು. ಅರ್ಜಿದಾರಳು 18 ರಿಂದ 55 ವರ್ಷದೊಳಗಿರಬೇಕು. ಅರ್ಜಿದಾರಳು ರಾಷ್ಟ್ರೀಕೃತ ಬ್ಯಾಂಕ್ ಖಾತೆಯನ್ನು ಹೊಂದಿದ್ದು, ಚಾಲ್ತಿಯಲ್ಲಿರಬೇಕು. ಜಾತಿ ಹಾಗೂ ಆದಾಯ ಪ್ರಮಾಣ ಪತ್ರ (ಆದಾಯ 2 ಲಕ್ಷ ಮೀರಿರಬಾರದು). ಯೋಜನಾ ವರದಿ ಲಗತ್ತಿಸುವುದು.

ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲಾತಿಗಳು:

ಪರಿಶಿಷ್ಟ ಪಂಗಡ ಜಾತಿ ಪ್ರಮಾಣ ಪತ್ರ. ಸಂಬಂಧಿಸಿದವರು ಮಾತ್ರ –ಮಾಜಿ ದೇವದಾಸಿ ಹಾಗೂ ಅವರ ಹೆಣ್ಣು ಮಕ್ಕಳಿಗೆ, (ಯೋಜನಾಧಿಕಾರಿಗಳು ದೇವದಾಸಿ ಪುನರ್ವಸತಿ ಯೋಜನೆ ಬೆಳಗಾವಿ ಇವರಿಂದ ಪ್ರಮಾಣ ಪತ್ರ) ದಮನಿತ ಮಹಿಳೆಯರು (ಸಮುದಾಯ ಆಧಾರಿತ ಸಂಸ್ಥೆಯವರಿಂದ ಪ್ರಮಾಣ ಪತ್ರ), ಕುಟುಂಬ ವಾರ್ಷಿಕ ಆದಾಯ ಪ್ರಮಾಣ ಪತ್ರ ವಿಳಾಸದ ದಾಖಲೆಗಳು (ಮತದಾರರ ಗುರುತಿನ ಚೀಟಿ, ಆಧಾರ್‌ಕಾರ್ಡ್, ಪಡಿತರಚೀಟಿ, ಯಾವುದಾದರೊಂದು ದಾಖಲೆ ಸಲ್ಲಿಸುವುದು, ಯೋಜನಾ ವರದಿ (ಅರ್ಜಿಯಲ್ಲಿ ನೀಡಿರುವಂತೆ ತುಂಬಿ ಸಲ್ಲಿಸತಕ್ಕದ್ದು) ತರಬೇತಿ ಅಥವಾ ಅನುಭವ ಪತ್ರ. ದ್ವಿ ಪ್ರತಿಯಲ್ಲಿ ಭರ್ತಿ ಮಾಡಿದ ಅರ್ಜಿ. ರಾಷ್ಟ್ರೀಕೃತ ಬ್ಯಾಂಕಿನಲ್ಲಿ ತೆರೆಯಲಾದ ಬ್ಯಾಂಕ್ ಖಾತೆಯ ಪುಸ್ತಕದ ನಕಲು ಪ್ರತಿ ಮತ್ತು ಬ್ಯಾಂಕಿನ ಹೆಸರು, ಐ.ಎಫ್.ಎಸ್.ಸಿ. ಕೋಡ್‌ನದಾಖಲೆ. 14.ರಹವಾಸಿ ಪ್ರಮಾಣ ಪತ್ರ, ಶಿಕ್ಷಣಕ್ಕೆ ಸಂಬಂಧಿಸಿದ ದಾಖಲಾತಿ.

ಅಪೂರ್ಣ ಮಾಹಿತಿ ಹಾಗೂ ಅಗತ್ಯ ದಾಖಲೆಗಳನ್ನು ಹೊಂದಿರದ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಎಂದು ಮಹಿಳಾ ಹಾಗೂ ಮಕ್ಕಳ ಅಭಿವೃದ್ಧಿ ಇಲಾಖೆ, ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಫೆ.12 ರಂದು ಬ್ರಾಹ್ಮಣ ವಧು/ವರ ಸಮಾವೇಶ

ಬೆಳಗಾವಿ: ಭಾರತೀಯ ಬ್ರಾಹ್ಮಣ ಸಂಘ, ಬೆಳಗಾವಿ ಶಾಖೆಯು ಚನ್ನಮ್ಮ ನಗರದಲ್ಲಿಯ ಸತ್ಯಪ್ರಮೋದ ಸಭಾಗೃಹದಲ್ಲಿ ಬರುವ ಫೆಬ್ರುವರಿ 12 ರಂದು ರವಿವಾರ ಬ್ರಾಹ್ಮಣ ವಧು/ವರ ಸಮಾವೇಶವನ್ನು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಹಮ್ಮಿಕೊಂಡಿದೆ.

ಈ ಹಿನ್ನೆಲೆಯಲ್ಲಿ ವಧು/ವರ ಸಮಾವೇಶದಲ್ಲಿ ಭಾಗವಹಿಸುವ ಇಚ್ಛುಕರು ಬೆಳಿಗ್ಗೆ 10.00 ರಿಂದ ಮದ್ಯಾಹ್ನ 2.00ರ ವರೆಗೆ ಸತ್ಯಪ್ರಮೋದ ಸಭಾಗೃಹದಲ್ಲಿ ನೊಂದಣಿ ಮಾಡಿಕೊಳ್ಳಬಹುದು.

ಅಂದು ಬ್ರಾಹ್ಮಣ ವಧು/ವರ ಸಮಾವೇಶದಲ್ಲಿ ಭಾಗವಹಿಸುವವರು ಕಡ್ಡಾಯವಾಗಿ ವಧು/ವರ ಜೊತೆ ಹಾಜರಿರಬೇಕು. ಹೆಚ್ಚಿನ ವಿವರಗಳಿಗೆ ಹಾಗೂ ದೂರವಾಣಿ ಮೂಲಕ ಹೆಸರು ನೊಂದಣಿ ಮಾಡಿಸಲು ಪದಾಧಿಕಾರಿಗಳಾದ ರಾಘವೇಂದ್ರ ಕಟ್ಟಿ 9739097507, ವಿನಾಯಕ ಕುಲಕರ್ಣಿ 9845858345, ಶ್ರೀಧರ ಹಲಗತ್ತಿ 8123909036, ಪೂರ್ಣಭೋಧ ಕಟ್ಟಿ 7795125343, ಶ್ರೀದೇವಿ ಕುಲಕರ್ಣಿ 9480677976, ಜ್ಯೋತಿ ಶಳ್ಳಿಕೇರಿ 9845249632 ಇವರುಗಳನ್ನು ಸಂಪರ್ಕಿಸಬಹುದಾಗಿದೆ.

10 ಸಾವಿರ ರೂ. ಲಂಚ ಪಡೆಯುವ ವೇಳೆ ಲೋಕಾಯುಕ್ತ ಬಲೆಗೆ ಬಿದ್ದ ಪೊಲೀಸ್ ಪೇದೆ

ಕೊಡಗು: ಪಾನ್ ಬೀಡಾ ಅಂಗಡಿ ಬಳಿ ಲಂಚ ಪಡೆಯುತ್ತಿದ್ದ ಪೇದೆಯೊಬ್ಬ ಲೋಕಾಯುಕ್ತರ ಬಲೆಗೆ ರೆಡ್ಹ್ಯಾಂಡ್ ಆಗಿ ಸಿಕ್ಕಿಬಿದ್ದಿರುವ ಘಟನೆ ಮಡಿಕೇರಿ ಗ್ರಾಮಾಂತರ ವ್ಯಾಪ್ತಿಯಲ್ಲಿ ನಡೆದಿದೆ.

ಮಡಿಕೇರಿ ಗ್ರಾಮಾಂತರ ಠಾಣಾ ಸಿಬ್ಬಂದಿ ಸೋಮಶೇಖರ್ ಸಜ್ಜನ್ ಲೋಕಾಯುಕ್ತರ ಬಲೆಗೆ ಬಿದ್ದ ಪೇದೆ. ಪೇದೆ ಸೋಮಶೇಖರ್ ಸಜ್ಜನ್, ಬಿಳಿಗೇರಿ ನಿವಾಸಿ ಕಿರಣ್ ಎಂಬುವವರ ಬಳಿ ಮಣ್ಣು ಸಾಗಾಟ ಮಾಡಲು ಹಣದ ಬೇಡಿಕೆ ಇಟ್ಟಿದ್ದ. ಅದರಂತೆ ಪೇದೆ ಸೋಮಶೇಖರ್ 10,000 ರೂ. ಲಂಚ ಪಡೆಯುವ ವೇಳೆ ಮಡಿಕೇರಿ ಲೋಕಾಯುಕ್ತ ಪೊಲೀಸರು ಕಾರ್ಯಾಚರಣೆ ನಡೆಸಿ ಬಂಧಿಸಿದ್ದಾರೆ.

ನಗರದ ಬೀಡಾ ಅಂಗಡಿಯ ಬಳಿ ಪೇದೆ ಸೋಮಶೇಖರ್ ಲಂಚ ಪಡೆಯುತ್ತಿದ್ದ ವೇಳೆ ಲೋಕಾಯುಕ್ತ ಪೊಲೀಸರು ಏಕಾಏಕಿ ದಾಳಿ ನಡೆಸಿದ್ದಾರೆ.

ಬೆಳಗಾವಿ : ಉತ್ತರ ಮತಕ್ಷೇತ್ರದಶಾಸಕ ಅನಿಲ ಬೆನಕೆ ರವರು ಬೆಂಗಳೂರಿನಲ್ಲಿ ಇಂದು ಮಾನ್ಯ ವಸತಿ ಸಚಿವರಾದಶ್ರೀ ವಿ. ಸೀಮಣ್ಣಅವರನ್ನು ಭೇಟಿ ಮಾಡಿಬೆಳಗಾವಿ ಉತ್ತರ ಮತಕ್ಷೇತ್ರದಲ್ಲಿನ ಎಲ್ಲ ನಿರಾಶ್ರಿತರಿಗೆ ಹಾಗೂ ಬಾಡಗೆ ಮನೆಯಲ್ಲಿ ವಾಸಿಸುವ ಪ್ರತಿ ಕುಟುಂಬ ಹಾಗೂ ಎಲ್ಲ ಸಮುದಾಯದ ಜನರಿಗೆ ಸನ್ಮಾನ್ಯ ಪ್ರಧಾನಿ ಶ್ರೀ ನರೇಂದ್ರಮೋದಿ ಜಿ ಅವರಆಶಯದಂತೆ ವಾಸಿಸಲು ಮನೆ ನಿರ್ಮಾಣಕ್ಕೆ ಅನುಮೋದನೆಕೋರಿ ಮನವಿಯನ್ನು ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾನ್ಯ ಸಚಿವರು ಶಾಸಕರ ಮನವಿಗೆ ಸಕಾರಾತ್ಮಕವಾಗಿ ಸ್ಪಂದಿಸಿದ ತ್ವರಿತವಾಗಿಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಕಾರಾಗೃಹದ ಸಿಬ್ಬಂದಿಯವರಿಗೆ ಕ್ಷಯರೋಗ ನಿರ್ಮೂಲನೆ ಕುರಿತು ಕಾರ್ಯಾಗಾರ

ಬೆಳಗಾವಿ: ಕೇಂದ್ರ ಕಾರಾಗೃಹ ಬೆಳಗಾವಿಯಲ್ಲಿ ಸಿಬ್ಬಂದಿಯವರಿಗಾಗಿ "ಕ್ಷಯರೋಗ ನಿರ್ಮೂಲನೆ" ಕುರಿತು ಒಂದು ದಿನದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿತ್ತು. ಸದರಿ ಕಾರ್ಯಕ್ರಮವು ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿಗಳ ಕಾರ್ಯಾಲಯ, ಬೆಳಗಾವಿ ಇವರುಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಸಸಿಗೆ ನಿರೂಣಿಸುವ ಮೂಲಕ ಉದ್ಘಾಟಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ಕ್ಷಯರೋಗ ನಿರ್ಮೂಲನಾ ಅಧಿಕಾರಿ ಡಾಃ ಅನೀಲ ಕೊರಬು ಮಾತನಾಡಿ ಭಾರತ ದೇಶದ ಗೌರವಾನ್ವಿತ ಪ್ರಧಾನ ಮಂತ್ರಿಯವರಾದ ಶ್ರೀ ನರೇಂದ್ರ ಮೋದಿಜಿಯವರು 2025ಕ್ಕೆ ಭಾರತವು ಕ್ಷಯರೋಗ ಮುಕ್ತ ದೇಶವಾಗಬೇಕೆಂದು ಘೋಷಿಸಿರುತ್ತಾರೆ. ಕಾರಣ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಕರ್ನಾಟಕ ಸರ್ಕಾರದ ದಿಟ್ಟ ಮತ್ತು ಮಹತ್ವಾಕಾಂಕ್ಷೆಯ ಗುರಿಯನ್ನು ಸಾಧಿಸಲು ಬದ್ಧರಾಗಿರುತ್ತಾರೆ.

ಆದ್ದರಿಂದ ಕರ್ನಾಟಕದ ಎಲ್ಲ ಕಾರಾಗೃಹಗಳಲ್ಲಿ ಇರುವ ಕೈದಿಗಳಿಗೆ ಕ್ಷಯರೋಗ ಪತ್ತೆ ಹಚ್ಚಿ ಚಿಕಿತ್ಸೆ ನೀಡಲು ವೈದ್ಯಾಧಿಕಾರಿಗಳಿಗೆ ಹಾಗೂ ಅಧಿಕಾರಿ ಸಿಬ್ಬಂದಿಯವರಿಗೆ ಪರಿಷ್ಕೃತ ಮಾರ್ಗಸೂಚಿಗಳನ್ವಯ ತರಬೇತಿಯನ್ನು ನೀಡಿ ಸನ್ 2025ಕ್ಕೆ ಕ್ಷಯರೋಗ ಮುಕ್ತ ಕರ್ನಾಟಕವನ್ನಾಗಿ ಮಾಡುವ ಗುರಿಯನ್ನು ಸಾಧಿಸಲು ಅನುಕೂಲವಾಗುವುದು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕಾರಾಗೃಹ ಮುಖ್ಯ ಅಧೀಕ್ಷಕರಾದ ಶ್ರೀ. ಕೃಷ್ಣಕುಮಾರ್, ಮಾತನಾಡಿ ಯಾವುದೇ ರೋಗ ಬರದಂತೆ ನಾವು ಸೂಕ್ತ ಮುನ್ನೆಚ್ಚರಿಕೆಗಳನ್ನು ಅಳವಡಿಸಿಕೊಳ್ಳಬೇಕು.

ಸರ್ಕಾರವು ಕ್ಷಯರೋಗವನ್ನು ನಿರ್ಮೂಲನೆ ಮಾಡಲು ಕೋಟಿಗಟ್ಟಲೆ ಖರ್ಚು ಮಾಡುತ್ತಿದ್ದು, ಕಾರಣ ನಾವೆಲ್ಲ ಈ ರೋಗದ ಬಗ್ಗೆ ಅರಿವು ಮೂಡಿಸಬೇಕಾಗಿರುತ್ತದೆ. ಸರ್ಕಾರ ದ ಮಾರ್ಗ ಸೂಚಿಯಂತೆ ಈ ಕಾರಾಗೃಹ ದಲ್ಲಿರುವ ಬಂದಿಗಳಿಗೆ ಕ್ಷಯರೋಗದ ಲಕ್ಷಣಗಳು ಕಂಡುಬಂದಲ್ಲಿ, ಅವರಿಗೆ ಸೂಕ್ತ ಚಿಕಿತ್ಸೆಯನ್ನು ನೀಡಲಾಗುವುದು.

ಬಂದಿಗಳ ಆರೋಗ್ಯದ ದೃಷ್ಟಿಯಿಂದ ಅನೇಕ ಆರೋಗ್ಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

ಸರ್ಕಾರದ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮದಲ್ಲಿ ಸರ್ವ ಅಧಿಕಾರಿ, ಸಿಬ್ಬಂದಿ ವರ್ಗದವರು ಸಕ್ರಿಯವಾಗಿ ಪಾಲ್ಗೊಂಡು ಕ್ಷಯರೋಗ ಮುಕ್ತ ಕರ್ನಾಟಕವನ್ನಾಗಿಸಲು ಕೈ ಜೋಡಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶ್ರೀ. ಪಿ.ಆರ್. ಪಾಟೀಲ ಇವರು ಕ್ಷಯರೋಗದ ಲಕ್ಷಣಗಳು, ಮುನ್ನೆಚ್ಚರಿಕೆಯ ಕ್ರಮಗಳು ಹಾಗೂ ಉಪಚಾರದ ಕುರಿತು ವಿಡಿಯೋ ಮೂಲಕ ಸರ್ವ ಸಿಬ್ಬಂದಿಯವರಿಗೆ ಮಾರ್ಗದರ್ಶನ ನೀಡಿದರು.

ಹಾಗೂ ಕ್ಷಯರೋಗದಿಂದ ಬಳಲುತ್ತಿರುವ ಬಡ ರೋಗಿಗಳಿಗೆ ಸರ್ಕಾರದಿಂದ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಹಿರಿಯ ವೈದ್ಯಾಧಿಕಾರಿಗಳಾದ ಡಾಃ ಮಹೇಶ ನಾಗರಬೆಟ್ಟ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀ. ಅನೀಲ ಕುಲಕರ್ಣಿ, ಶ್ರೀ. ಎಸ್.ಜಿ. ಲಾಡ್ ಹಾಗೂ ಸಹಾಯಕ ಅಧೀಕ್ಷಕರಾದ ಶ್ರೀ ಶಹಾಬುದ್ದೀನ್ ಕೆ ಹಾಗೂ ಅಧಿಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಅಕ್ಷಯ ದ್ವಾರ ಬಾಗಿಲು ಉದ್ಘಾಟನೆ ಮಾಡಿದ ಶಾಸಕ ಬಿ.ನಾಗೇಂದ್ರ

ಬಳ್ಳಾರಿ : ಬಳ್ಳಾರಿ ತಾಲೂಕಿನ ಬೇವಿನಹಳ್ಳಿ ಗ್ರಾಮದಲ್ಲಿ ಶಾಸಕರ ಅನುದಾನ ಅಡಿಯಲ್ಲಿ 8 ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ಗ್ರಾಮದ ಅಕ್ಷಯ ದ್ವಾರ ಬಾಗಿಲನ್ನು ಬಳ್ಳಾರಿ ಗ್ರಾಮಾಂತರ ಜನಪ್ರಿಯ ಶಾಸಕರಾದ ಬಿ.ನಾಗೇಂದ್ರ ಅವರು ಉದ್ಘಾಟನೆ ಮಾಡಿದರು.

ಅಕ್ಷಯ ದ್ವಾರ ಬಾಗಿಲು ಉದ್ಘಾಟಿಸಿ ಮಾತನಾಡಿದ ಶಾಸಕ ಬಿ.ನಾಗೇಂದ್ರ ಅವರು ಗ್ರಾಮೀಣ ಕ್ಷೇತ್ರ ವ್ಯಾಪ್ತಿಗೆ ಬರುವ ಗ್ರಾಮಗಳಲ್ಲಿ ಅಭಿವೃದ್ಧಿ ಪಡಿಸುವುದು ನನ್ನ ಕಾಯಕ. ನಾನು ಸಾರ್ವಜನಿಕರಲ್ಲಿ ನಿರಂತರವಾಗಿ ವಿನಂತಿಸಿಕೊಳ್ಳುವುದೇನೆಂದರೆ ಗ್ರಾಮವನ್ನು ಸ್ವಚ್ಛತೆ ಕಾಪಾಡಿಕೊಳ್ಳಬೇಕು ಹಾಗೂ ಮುಂಬರುವ ದಿನಗಳಲ್ಲಿ ಕೂಡ ನಿಮ್ಮ ಆಶೀರ್ವಾದ, ಪ್ರೀತಿ ನನ್ನ ಮೇಲೆ ಇದೇ ರೀತಿ ಇರಲೆಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಮುಖಂಡರಾದ ಬಿ.ವೆಂಕಟೇಶ್ ಪ್ರಸಾದ್, ಅಮರೇಗೌಡ, ಗ್ರಾಮ ಪಂಚಾಯತಿ ಅಧ್ಯಕ್ಷರಾದ ಗಿರಿಜಮ್ಮ ಶಂಕ್ರಪ್ಪ, ಗ್ರಾಮ ಪಂಚಾಯಿತಿ ಸದಸ್ಯರು ಟಿ.ಎರ್ರಿಸ್ವಾಮಿ, ಕೆಂಪು ಹೊನ್ನೂರಪ್ಪ, ಗೋಡೇಹಾಳ್ ಮಲ್ಲಿ, ಅಂಜಿ, ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡರಾದ ಶಂಕ್ರಪ್ಪ ಗಂಗಾಧರಪ್ಪ, ಕೆ.ನಾಗರಾಜ, ವಡ್ಡರು ಎರ್ರಿಸ್ವಾಮಿ, ಜೀರು ಪಂಪಣ್ಣ, ಮಹೇಶ್ ಕಾಂಗ್ರೆಸ್ ಪಕ್ಷದ ಮುಖಂಡರಾದ ಬೆಣಕಲ್ ಬಸವರಾಜ್ ಗೌಡ, ಪರಶುರಾಮ್, ಬಿ.ಆರ್.ಎಲ್ ಸೀನಾ, ಗೋನಾಳ್ ನಾಗಭೂಷಣ ಗೌಡ, ಶ್ರೀನಾಥ್, ಶಂಕರಬಂಡೆ ಗೋವಿಂದ ರೆಡ್ಡಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಖಂಡರು ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಉಪಸ್ಥಿತರಿದ್ದರು.

ರಾಮಮಂದಿರದ ಅಗತ್ಯವಿಲ್ಲ, ಮೂಲ ಸೌಕರ್ಯ ನೀಡಿ: ನಟ ಚೇತನ್

ರಾಮನಗರ: ನಮಗೆ ರಾಮಮಂದಿರದ ಅಗತ್ಯವಿಲ್ಲ. ದೇವಸ್ಥಾನಗಳು ನಮ್ಮ ಬದುಕನ್ನ ಕಟ್ಟಿಕೊಡುವುದಿಲ್ಲ. ಅದರ ಬದಲು ಜನರಿಗೆ ಮೂಲ ಸೌಕರ್ಯ ಒದಗಿಸಿ ಎಂದು ನಟ, ಚಿಂತಕ ಚೇತನ್ ಒತ್ತಾಯಿಸಿದ್ದಾರೆ.

ರಾಮನಗರ ತಾಲೂಕಿನ ಕೂನಮುದ್ದಹಳ್ಳಿಯ ದಲಿತ ಕಾಲೋನಿಯಲ್ಲಿಂದು ಮೂಲ ಸೌಕರ್ಯ ಕಲ್ಪಿಸುವಂತೆ ಆಗ್ರಹಿಸಿ ನಟ ಚೇತನ್ ನೇತೃತ್ವದಲ್ಲಿ ಪ್ರತಿಭಟನೆ ನಡೆಸಲಾಯಿತು.

ಈ ವೇಳೆ ಮಾತನಾಡಿದ ಅವರು, ರಾಜಕೀಯ ಪಕ್ಷಗಳು ಚುನಾವಣೆಗಾಗಿ ಗಿಮಿಕ್ ಮಾಡ್ತಿದ್ದಾರೆ. ನಮಗೆ ರಾಮಮಂದಿರದ ಅವಶ್ಯಕತೆಯಿಲ್ಲ. ಇದನ್ನ ದಕ್ಷಿಣ ಅಯೋಧ್ಯೆ ಮಾಡಲು ಸರ್ಕಾರ ಕೂಡ ಅನುಮತಿ ನೀಡಬಾರದು. ಇದೆಲ್ಲವನ್ನು ಬಿಟ್ಟು ಮೊದಲು ಜನರಿಗೆ ಮೂಲ ಸೌಕರ್ಯ ಕಲ್ಪಿಸಿ ಎಂದು ಸರ್ಕಾರಕ್ಕೆ ಆಗ್ರಹಿಸಿದ್ದಾರೆ.

ಕೇಂದ್ರ ಬಜೆಟ್ ವಿಚಾರವಾಗಿ ಮಾತನಾಡಿ, ಇದು ಶ್ರೀಮಂತರ ಪರವಾದ ಬಜೆಟ್. ಈ ಬಜೆಟ್‌ನಿಂದ ಜನಸಾಮಾನ್ಯರಿಗೆ ಯಾವುದೆ ಅನುಕೂಲವಾಗಿಲ್ಲ. ತೆರಿಗೆ ವಿನಾಯಿತಿಯಿಂದ ಬಡವರಿಗೆ ಉಪಯೋಗವಿಲ್ಲ ಎಂದು ಅಸಮಾಧಾನ ಹೊರಹಾಕಿದ್ದಾರೆ.

ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಸ್ಪರ್ಧೆ ವಿಚಾರ ಕುರಿತು ಪ್ರತಿಕ್ರಿಯಿಸಿ, ನಾನು ಯಾವುದೇ ಕಾರಣಕ್ಕೂ ಚುನಾವಣೆಯಲ್ಲಿ ಸ್ಪರ್ಧಿಸಲ್ಲ. ಸಮಾನತೆ ಪರವಾದ ಹೋರಾಟವಷ್ಟೇ ನಮ್ಮ ಕೆಲಸ. ಬುದ್ಧ, ಬಸವ, ಅಂಬೇಡ್ಕರ್ ತತ್ವಕ್ಕೆ ನಮ್ಮ ಬೆಂಬಲ ಎಂದು ನುಡಿದಿದ್ದಾರೆ.

ಉದ್ಯೋಗ ವಾಹಿನಿ ಸಂಚಾರಿ ವಾಹನಕ್ಕೆ ಚಾಲನೆ

ಬೆಳಗಾವಿ: ಬೆಳಗಾವಿ ತಾಲ್ಲೂಕು ಪಂಚಾಯತ ಕಚೇರಿ ಆವರಣದಲ್ಲಿ ಗುರುವಾರ (ಫೆ.2) ಉದ್ಯೋಗ ವಾಹಿನಿ ವಾಹನಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ದರ್ಶನ್ ಎಚ್.ವ್ಹಿ ಅವರು ಚಾಲನೆ ನೀಡಿದರು.

ಉದ್ಯೋಗ ವಾಹಿನಿಯು ಬೆಳಗಾವಿ ತಾಲ್ಲೂಕಿನ ಗ್ರಾಮಗಳಿಗೆ ಸಂಚರಿಸಿ ನರೇಗಾ ಯೋಜನೆಯಡಿ ದೊರಕುವ ಕೃಷಿ ಹೊಂಡ, ಅಲ್ಪ ಆಳದ ಬಾವಿ, ಜಮೀನು ಸಮತಟ್ಟು ಸೇರಿದಂತೆ ವಿವಿಧ ಕಾಮಗಾರಿಗಳ ಕುರಿತು ಪ್ರಚಾರ ಮಾಡಲಿದೆ.

ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಜೇಶ ದಾನವಾಡಕರ, ಸಹಾಯಕ ನಿರ್ದೇಶಕರು (ಗ್ರಾ.ಉ) ರಾಜೇಂದ್ರ ಮೊರಬದ, ಸಹಾಯಕ ನಿರ್ದೇಶಕರಾದ (ಪಂಚಾಯತ ರಾಜ್) ಗಣೇಶ ಕೆ ಎಸ್, ಜಿಲ್ಲಾ ಪಂಚಾಯತ ಸಹಾಯಕ ಕಾರ್ಯಕ್ರಮಗಳ ಸಂಯೋಜರಾದ ಬಸವರಾಜ ಎನ್, ಜಿಲ್ಲಾ ಐಇಸಿ ಸಂಯೋಜಕರು ಪ್ರಮೊದ ಗೊಡೆಕರ್,

ತಾಂತ್ರಿಕ ಸಂಯೋಜಕರಾದ ನಾಗರಾಜ ಯರಗುದ್ದಿ, ಎಂ.ಐ.ಎಸ್ ಸಂಯೋಜಕರಾದ ಶೀತಲ್ ಪಾಟೀಲ್, ತಾಐಇಸಿ ಸಂಯೋಜಕರಾದ ರಮೇಶ ಮಾದರ ಹಾಗೂ ತಾಲ್ಲೂಕು ಪಂಚಾಯತ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಕಳ್ಳಿಗುದ್ದಿ ಪಿಕೆಪಿಎಸ್ ಸಂಘದ ಎರಡನೇ ಮಹಡಿಯ ಉದ್ಘಾಟನೆ ನೆರವೇರಿಸಿದ ಶಾಸಕ ಬಾಲಚಂದ್ರ ಜಾ